ಸಂಪುಟ : 9 ಸಂಚಿಕೆ 128 ಪುಟ : 4 ಬೆಲೆ: 3.00 ರವಿವಾರ ಜೂನ್ 23 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 128 Pages : 4 Price : 3.00 Sunday June 23 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಶಾಸಕ ಜಿ.ಎಸ್. ಪಾಟೀಲ ಮುತುವರ್ಜಿ

ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ



■ ವಿಜಯಸಾಕ್ಷಿ ಸುದ್ದಿ, ರೋಣ

ರೋಣ ತಾಲೂಕು ಸೇರಿದಂತೆ ಜಿಲ್ಲೆಯ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಎಸ್.ಆರ್. ಫೌಂಡೇಷನ್ ವತಿಯಿಂದ ಎರಡು ತಿಂಗಳವರೆಗೆ ನುರಿತ ಉಪನ್ಯಾಸಕರುಗಳಿಂದ ಐಎಎಸ್, ಕೆಎಎಸ್ ಸೇರಿದಂತೆ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ಉಚಿತ ತರಬೇತಿ ಕೇಂದ್ರವನ್ನು ರೋಣ ಆರ್‌ಜಿಎಸ್ ಶಿಕ್ಷಣ ಸಂಸ್ಥೆಯಲ್ಲಿ ತೆರಯಲಾಗಿದೆ.

ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಮಹನೀಯರಿಂದ ಜೂನ್ 23ರಂದು ಬೆಳಿಗ್ಗೆ 11 ಗಂಟೆಗೆ ಉಚಿತ ತರಬೇತಿ ಕೇಂದ್ರವನ್ನು ವಿಜಯಪೂರ ಜಿಲ್ಲೆಯ ಚಾಣಕ್ಯ ಕರಿಯರ್ ಅಕಾಡಮಿ ಮುಖ್ಯಸ್ಥ ಎನ್.ಎಮ್. ಬಿರಾದಾರ ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಐಪಿಎಸ್ ಅಧಿಕಾರಿ ರವಿ ಡಿ.ಚನ್ನಣ್ಣವರ, ಗಂಗಾಧರ ಪಿ.ಎಸ್, ಮಂಜುನಾಥ ಬಾಡಗಿ, ಸೋಮು ದುಂಡಿಗೇರಿ, ಗರಣಿ ಕೃಷ್ಣಮೂರ್ತಿ, ಆರ್.ವೆಂಕಟರಮಣಸ್ವಾಮಿ, ಡಾ. ಗುರುರಾಜ ಬುಲಬುಲೆ, ಸಿದ್ದಣ್ಣ ದಳವಾಯಿ, ಈಶ್ವರಗಿರಿ, ಶರಣಯ್ಯ ಬಂಡಾರಿಮಠ, ಆರ್.ಮಂಜುನಾಥ ಮುಂತಾದವರು ಆಗಮಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಜಿ.ಎಸ್. ಪಾಟೀಲ ವಹಿಸಲಿದ್ದಾರೆ.

ಶಾಸಕ ಜಿ.ಎಸ್. ಪಾಟೀಲ ರವರ ಮುತುವರ್ಜಿಯಿಂದ ನಡೆಸಲಾಗುತ್ತಿರುವ ಉಚಿತ ತರಬೇತಿಯಲ್ಲಿ ಪರೀಕ್ಷೆಗೆ ಸಂಬಂಧಿಸಿದ ವಿಷಯಗಳ ಪುಸ್ತಕಗಳನ್ನು ಸಹ ಉಚಿತವಾಗಿ ಒದಗಿಸಲಾಗುವುದು. ಅಶೋಕ ಮಿರ್ಜಿ, ಮಂಜುನಾಥ ಬಿ, ಹುಸೇನಪ್ಪ ನಾಯ್ಕರವರಿಂದ ಉಪನ್ಯಾಸ ಒದಗಿಸಲು ಎಸ್.ಆರ್. ಪಾಟೀಲ ಫೌಂಡೇಷೇನ್ ಸಿದ್ಧತೆ ಮಾಡಿಕೊಂಡಿದೆ.

ಖಾಸಗಿ ಹಾಸ್ಟೆಲ್‌ಗಳಿಗೆ ಸೆಡ್ಡು ಹೊಡೆದ ಮಾದರಿ ವಸತಿ ನಿಲಯ

ನಂಬಿ, ಇದು ಸರ್ಕಾರಿ ಹಾಸ್ಟೆಲ್!

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಿಗೆ ಓದಲು ಒಳ್ಳೆಯ ವ್ಯವಸ್ಥೆ, ಸ್ವಚ್ಛ ಪರಿಸರ, ಹೈಟೆಕ್ ಲೈಬ್ರರಿ, ಕಂಪ್ಯೂಟರ್ ಲ್ಯಾಬ್, ವಿದ್ಯಾರ್ಥಿಗಳ ಮನಸ್ಸಿಗೆ ಬೇಸರವಾದರೆ ಮುದ ನೀಡಲು ಬಣ್ಣ ಬಣ್ಣದ ಕಾರಂಜಿ ವ್ಯವಸ್ಥೆ... ಹೀಗೆ, ಖಾಸಗಿ ವಸತಿ ನಿಲಯಗಳಿಗೆ ಸೆಡ್ಡು ಹೊಡೆಯುವ ಇಲ್ಲಿನ ವ್ಯವಸ್ಥೆ ನೋಡಿದರೆ, ಅಬ್ಬಾ! ಇದು ಸರ್ಕಾರಿ ವಿದ್ಯಾರ್ಥಿ ನಿಲಯವೇ ಎಂಬ ಪ್ರಶ್ನೆ ಮೂಡುತ್ತದೆ.

ಇದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ಮಾದರಿ ವಸತಿ ನಿಲಯ. ಹೆಸರಿಗೆ ಮಾತ್ರ ಮಾದರಿಯಲ್ಲ, ವ್ಯವಸ್ಥೆಯಲ್ಲೂ ಮಾದರಿಯಾಗಿದೆ. ಬಡ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸರ್ಕಾರಿ ವಸತಿ ನಿಲಯಗಳು ನಿರ್ಮಾಣವಾಗುತ್ತವೆ. ಆದರೆ, ಇಂತಹ ವಸತಿ ನಿಲಯಗಳು ಅವ್ಯವಸ್ಥೆಗಳ ಗೂಡಾಗಿರುವ ವಿದ್ಯಮಾನಗಳು ಆಗಾಗ ಮಾಧ್ಯಮಗಳಲ್ಲಿ ವರದಿಯಾಗುತ್ತಿರುತ್ತವೆ. ಆದರೆ, ಗದಗ ನಗರದ ಮುಳಗುಂದ ರಸ್ತೆಯಲ್ಲಿರುವ ಈ ಸರ್ಕಾರಿ ಮೆಟ್ರಿಕ್ ನಂತರದ ವಸತಿ ನಿಲಯ ಅವೆಲ್ಲವುಗಳಿಗೆ ಅಪವಾದವೆಂಬಂತಿದೆ.

> ಸರ್ಕಾರದ ವೇತನ ಪಡೆದು, ಕೆಲಸ ಮಾಡಿ ಮನೆಗೆ ಹೋಗುವ ನೌಕರರ ನಡುವೆ ಇಲ್ಲಿಯ ಅಧಿಕಾರಿ ಬಸವರಾಜ್ ಬಳ್ಳಾರಿ ಮಾದರಿಯಾಗಿದ್ದಾರೆ. ಅವರ ಶ್ರಮದಿಂದ ಈ ವಿದ್ಯಾರ್ಥಿ ವಸತಿ ನಿಲಯ ಇಡೀ ಜಿಲ್ಲೆಗೆ ಮಾದರಿ ವಸತಿ ನಿಲಯ ಎಂದು ಖ್ಯಾತಿ ಪಡೆದಿದೆ. ಇದೇ ಮಾದರಿಯಲ್ಲಿ ಗದಗ ಜಿಲ್ಲೆಯ ಏಳು ತಾಲೂಕಿನಲ್ಲಿ ಇಂತಹುದೇ ಹಾಸ್ಟೆಲ್ ಮಾಡಬೇಕೆಂಬ ಗುರಿಯನ್ನು ಇಲಾಖೆ ಇಟ್ಟುಕೊಂಡಿದೆ.

180ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ವಸತಿ ನಿಯದಲ್ಲಿ ಆಶ್ರಯ ಪಡೆದಿದ್ದಾರೆ. ಹಾಸ್ಟೆಲ್ ಎದುರು ಗಾರ್ಡನ್, ಕಟ್ಟಡದ ಗೋಡೆಗಳ ಮೇಲೆ ಮನಃಪರಿವರ್ತನೆಯಾಗುವ ಬರಹಗಳು, ರಾಜ್ಯದ ಪ್ರಮುಖ ಪ್ರವಾಸಿ ತಾಣಗಳ ಚಿತ್ರಗಳು, ಅಷ್ಟೇ ಏಕೆ, ವಿದ್ಯಾರ್ಥಿಗಳಿಗೆ ಹಾಸಿಗೆ, ಊಟೋಪಹಾರದ ವ್ಯವಸ್ಥೆಯೂ ಅಷ್ಟೇ ಅಚ್ಚುಕಟ್ಟಾಗಿದೆ. ವಿದ್ಯಾರ್ಥಿಗಳಿಗೆ ಅಧ್ಯಯನಕ್ಕೆ ಪೂರಕವಾದ ವಾತಾವರಣ ನಿರ್ಮಿಸಲಾಗಿದೆ. ಹೈಟೆಕ್ ಲೈಬ್ರರಿ, ಕಂಪ್ಯೂಟರ್ ಲ್ಯಾಬ್ ಸೇರಿದಂತೆ ಸಾಕಷ್ಟು ಸೌಲಭ್ಯ ನೀಡಲಾಗಿದೆ. ಗದಗ ಜಿಲ್ಲೆಯಲ್ಲಿ ಇದೊಂದು ಮಾದರಿ ವಸತಿ ನಿಲಯವೆಂದೇ ಪ್ರಸಿದ್ಧಿ ಪಡೆದಿದೆ. ಇಲ್ಲಿನ ಸೌಲಭ್ಯಗಳ ಸದುಪಯೋಗ ಪಡೆದುಕೊಂಡ ವಿದ್ಯಾರ್ಥಿಗಳು ಉತ್ತಮ ಫಲಿತಾಂಶವನ್ನೂ ಪಡೆಯುತ್ತಿದ್ದಾರೆ. ಇಲ್ಲಿ ಕಲಿತ ಸಾಕಷ್ಟು ವಿದ್ಯಾರ್ಥಿಗಳು ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

ಈ ಮಾದರಿ ಮೆಟ್ರಿಕ್ ನಂತರ ವಸತಿ ನಿಲಯ ಇಡೀ ರಾಜ್ಯಕ್ಕೆ ಮಾದರಿಯಾಗಿದೆ. ದಿಗಂತದ ದೇವರಾಜ್ ಅರಸು ಅವರ ಪುತ್ಥಳಿಯನ್ನು ನಿರ್ಮಾಣ ಮಾಡಲಾಗಿದ್ದು, ಅದಕ್ಕೆ ಬಣ್ಣದ ಕಾರಂಜಿ ವ್ಯವಸ್ಥೆ

ಮಾಡಲಾಗಿದೆ. ಹೈಟೆಕ್ ಗ್ರಂಥಾಲಯ ಸ್ಪರ್ಧಾತ್ಮಕ ಪರೀಕ್ಷೆಗೆ ಅಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಎಲ್ಲಾ ತರಹದ ಪುಸ್ತಕ ವ್ಯವಸ್ಥೆ ಕಲ್ಪಿಸುತ್ತಿದೆ. ರಾಜ್ಯದಲ್ಲಿಯೇ ಪ್ರಥಮ ಎಂಬಂತೆ ದಿ. ದೇವರಾಜ್ ಅರಸು ಅವರ ಗ್ಯಾಲರಿ ನಿರ್ಮಿಸಲಾಗಿದ್ದು, ಇಲ್ಲಿ ಅರಸು ಅವರ ಬಾಲ್ಯ ಜೀವನ, ಯೌವನ ಹಾಗೂ ಅವರು ರಾಜಕೀಯದಲ್ಲಿ ನಡೆದುಬಂದ ದಾರಿಯ ಬಗ್ಗೆ ತಿಳಿಸುವ ಫೋಟೋ ಗ್ಯಾಲರಿ ಮಾಡಲಾಗಿದೆ.

ಹಾಗೆಂದು, ಈ ಹಾಸ್ಟಲ್‌ಗೆ ವಿಶೇಷ ಅನುದಾನವೇನೂ ಲಭ್ಯವಾಗಿಲ್ಲ. ಎಲ್ಲಾ ವಸತಿ ನಿಲಯಗಳಿಗೆ ಬರುವಷ್ಟೇ ಅನುದಾನ ಈ ವಸತಿ ನಿಲಯಕ್ಕೂ ಬಂದಿದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿಸ್ತರಣಾಧಿಕಾರಿ ಬಸವರಾಜ್ ಬಳ್ಳಾರಿ ಅವರ ವಿಶೇಷ ಮುತುವರ್ಜಿಯಿಂದ ಹಳೆಯ ವಿದ್ಯಾರ್ಥಿಗಳ ಸಂಘವನ್ನು ರಚಿಸಿ, ಅವರ ಹಣಕಾಸಿನ ಸಹಯೋಗದಲ್ಲಿ ಹೈಟೆಕ್ ಸ್ಪರ್ಶ ನೀಡಲಾಗಿದೆ.

ಶುದ್ಧ ನೀರಿನ ಘಟಕ ಸ್ಥಾಪನೆಗೆ ಭೂಮಿ ಪೂಜೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಶುದ್ಧ ನೀರಿನ ಘಟಕ ಸ್ಥಾಪನೆಗೆ ಭೂಮಿ ಪೂಜಾ ಕಾರ್ಯಕ್ರಮವನ್ನು ಜೂನ್ 24ರ ಬೆಳಿಗ್ಗೆ 10.30ಕ್ಕೆ ಶಾಲಾ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಬಸವರಾಜ್ ಅಣ್ಣಿಗೇರಿ ತಿಳಿಸಿದ್ದಾರೆ.

ಉತ್ತಮ ಆರೋಗ್ಯಕ್ಕೆ ಶುದ್ಧ ನೀರಿನ ಅವಶ್ಯಕತೆಯಿರುವುದನ್ನು ಅರಿತ ಸಭಾಪತಿ ಬಸವರಾಜ ಹೊರಟ್ಟಿ ಅವರು ಇಲ್ಲಿ ಓದುತ್ತಿರುವ 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ನಿತ್ಯ ಶುದ್ಧ ನೀರು ಕುಡಿಯಲು ಅವಕಾಶ ಕಲ್ಪಿಸಿ ಕೊಡಲಿದ್ದಾರೆ . ಇಂತಹ ಮಹತ್ವದ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಶಂಕ್ರಮ್ಮ ಆರ್.ಹಣಮಗೌಡ್ರು, ಸಂಜೀವಿನಿ ಜಿ.ಕೂಲಗುಡಿ, ಎಂ.ಐ. ಶಿವನಗೌಡ್ರು, ಮಂಜುಳಾ ಪಿ. ಸಾಮ್ರಾಣಿ, ಶಶಿಕಲಾ ಬಿ.ಗುಳೇದವರ, ಸುಮಂಗಲ ಎಂ.ಪತ್ತಾರ್, ಶೋಭಾ ಎಸ್.ಗಾಳಿ, ಶಾರದಾ ಎ.ಬಾಣದ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು.ಕುಷ್ಟಗಿ, ಗಂಗಾ ಎಂ.ಅಳವಂಡಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್ ಮುಂತಾದವರು ವಿನಂತಿಸಿದ್ದಾರೆ.

ಶಾಸಕ ಡಾ. ಚಂದ್ರು ಲಮಾಣಿಯವರಿಂದ ಲೋಕೋಪಯೋಗಿ ಸಚಿವರಿಗೆ ಮನವಿ

ರಸ್ತೆ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿರಹಟ್ಟಿ ಕ್ಷೇತ್ರದ ಬಗ್ಗೆ ವಿಶೇಷ ಕಾಳಜಿ ಹೊಂದಿರುವ ಶಾಸಕ ಡಾ.ಚಂದ್ರು ಲಮಾಣಿ ವಿವಿಧ ಇಲಾಖೆಗಳಿಗೆ ಹಾಗೂ ಸಚಿವರನ್ನು ಭೇಟಿ ಮಾಡಿ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಒದಗಿಸುವಂತೆ ಮನವಿ ಮಾಡಿದ್ದಾರೆ. ಮುಖ್ಯವಾಗಿ, ಕ್ಷೇತ್ರದಲ್ಲಿ ಹದಗೆಟ್ಟಿರುವ ರಸ್ತೆಗಳ ಸುಧಾರಣೆಗೆ ಹೆಚ್ಚಿನ ಅನುದಾನ ಒದಗಿಸುವಂತೆ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರನ್ನು ಶನಿವಾರ ಬೆಂಗಳೂರಿನಲ್ಲಿ ಭೇಟಿ ಮಾಡಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ.ಚಂದ್ರು ಲಮಾಣಿ ಕ್ಷೇತ್ರದ ಶಿರಹಟ್ಟಿ, ಮುಂಡರಗಿ, ಲಕ್ಷ್ಮೇಶ್ವರ ತಾಲೂಕುಗಳಲ್ಲಿನ ಬಹುತೇಕ ರಸ್ತೆಗಳು ದುರಸ್ಥಿ ಕಾಣದೆ ಹದಗೆಟ್ಟಿವೆ. ಕಳೆದ ವರ್ಷವು ಸಹ ರಸ್ತೆ ಅಭಿವೃದ್ಧಿಗೆ ದೊರೆತ ಅನುದಾನವು ಕಡಿಮೆಯಾಗಿದ್ದು, ಕ್ಷೇತ್ರಗಳಿಗೆ ವಿವಿಧ ಇಲಾಖೆಗಳಿಗೆ

ದೊರೆಯಬೇಕಾದ ಅನುದಾನವೂ ಸರಿಯಾಗಿ ದೊರಕಿಲ್ಲ. ಕ್ಷೇತ್ರದ ಅಭಿವೃದ್ಧಿಯ ದೃಷ್ಟಿಯಿಂದ ಆಯಾ ಇಲಾಖೆಗಳ ಸಚಿವರನ್ನು ಭೇಟಿ ಮಾಡಿ ಅನುದಾನ ನೀಡುವಂತೆ ಮನವಿ ಮಾಡಲಾಗುತ್ತಿದೆ.

> ಸಚಿವರು ತಮ್ಮ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಅವರಿಗೆ ಕ್ಷೇತ್ರದ ಮುಖ್ಯ ರಸ್ತೆಗಳು, ಗ್ರಾಮೀಣ ರಸ್ತೆಗಳ ಸ್ಥಿತಿಗಳ ಬಗ್ಗೆ ವಿವರಿಸಲಾಗಿದೆ. ಇಲಾಖೆಯಿಂದ ಲಭ್ಯವಿರುವ ಅನುದಾನವನ್ನು ಶಿರಹಟ್ಟಿ ಕ್ಷೇತ್ರಕ್ಕೆ ಆದ್ಯತೆಯ ಮೇಲೆ ಹಂತ ಹಂತವಾಗಿ ನೀಡುವದಾಗಿ ಭರವಸೆ ನೀಡಿದ್ದಾರೆ ಎಂದು ಶಾಸಕ ಡಾ. ಲಮಾಣಿ ಮಾಹಿತಿ ನೀಡಿದ್ದಾರೆ.

ರಸ್ತೆಯ ಅಭಿವೃದ್ಧಿಯಾದರೆ ವ್ಯಾಪಾರ-ವಹಿವಾಟು ಅಭಿವೃದ್ಧಿಯಾಗುತ್ತದೆ. ಅದಕ್ಕಾಗಿ ಕ್ಷೇತ್ರದ ಸಮಸ್ತ ರಸ್ತೆಗಳನ್ನು ಸರ್ವಋತು ರಸ್ತೆಗಳನ್ನಾಗಿ ನಿರ್ಮಿಸುವ ಕನಸು ಹೊಂದಿದ್ದೇನೆ. ಇದಕ್ಕೆ ಸರಕಾರ ಆದ್ಯತೆ ಮೇರೆಗೆ ಅನುದಾನ ಒದಗಿಸುವಂತೆ ಲೋಕೋಪಯೋಗಿ ಸಚಿವರಾದ ಸತೀಶ ಜಾರಕೀಹೊಳಿ ಅವರನ್ನು ಭೇಟಿ ಮಾಡಿ ಕ್ಷೇತ್ರದ ಬಗ್ಗೆ ಚರ್ಚಿಸಿ, ಮನವಿ ಮಾಡಲಾಗಿದೆ ಎಂದರು.

ಕಲುಷಿತ ನೀರಿನಿಂದ ಆರೋಗ್ಯ ಕೆಡದಂತೆ ಜಾಗೃತಿ ಮೂಡಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಲ ಮೂಲ ಸಂರಕ್ಷಣೆ ಮತ್ತು ಕಲುಷಿತ ಕುಡಿಯುವ ನೀರಿನಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನೀರಿನ ಮೂಲಗಳು ಕಲುಷಿತಗೊಳ್ಳದಂತೆ ಸೂಕ್ತ ಕ್ರಮವಹಿಸುವುದು ಹಾಗೂ ಕಲುಷಿತ ನೀರಿನಿಂದ ಆರೋಗ್ಯ ಕೆಡದಂತೆ ಜನರಿಗೆ ಜಾಗೃತಿ ಮೂಡಿಸುವ ಬಗ್ಗೆ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕುಡಿಯುವ ನೀರಿನ ಗುಣಮಟ್ಟ ಪರೀಶೀಲಿಸಿ ಫಾಕಿಒಖಖ ನಲ್ಲಿ ಇಂಧ್ರೀಕರಿಸಲು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಸೂಚಿಸಿದರು.

ಇದೇ ಸಂದರ್ಭದಲ್ಲಿ ನೀರಿನ ಮೂಲಗಳು ಕಲುಷಿತಗೊಳ್ಳದಂತೆ ಅರಿವು ಮೂಡಿಸಲು ಭಿತ್ತಿ ಪತ್ರಗಳನ್ನು ಬಿಡುಗಡೆಗೊಳಿಸಿದರು. ಜಿ.ಪಂ. ಉಪ ಕಾರ್ಯದರ್ಶಿಗಳು, ಸಹಾಯಕ ಕಾರ್ಯದರ್ಶಿ ಇದ್ದರು.

ಸುದ್ದಿಗೋಷ್ಠಿಯಲ್ಲಿ ಸಾಹಿತಿ ಬಸವರಾಜ ಸೂಳಿಭಾವಿ ಆರೋಪ

ಕಾಂಗ್ರೆಸ್ ಅಧಃಪತನಕ್ಕೆ ಇಳಿದಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಗತಿಪರರ ಆಶಯಗಳ ಮೇಲೆ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರಕಾರ, ಅವರನ್ನೇ ಅವಮಾನಿಸುವ ಕೃತ್ಯಕ್ಕೆ ಇಳಿದಿರುವುದು ದುರಂತ. ಸಾಹಿತ್ಯ, ಸಾಂಸ್ಕೃತಿಕ ಅಕಾಡೆಮಿ, ಪ್ರಾಧಿಕಾರಗಳು ಸ್ವಾಯತ್ತವಾಗಿ ಕಾರ್ಯನಿರ್ವಹಿಸುತ್ತವೆ. ಅಂಥ ಸಂಸ್ಥೆಗಳ ಮುಖ್ಯಸ್ಥರನ್ನು ಪಕ್ಷದ ಕಚೇರಿಗೆ ಕರೆಸಿ ಮಾತಾಡಿದ್ದು ಸರಿಯಲ್ಲ. ಸಭೆಯಲ್ಲೂ ಪಕ್ಷದ ಪ್ರತಿನಿಧಿಯಾಗಿ ಕೆಲಸ ಮಾಡಬೇಕು ಎಂದಿರುವುದು ಸಂವಿಧಾನ ಆಶಯಗಳಿಗೆ ವಿರುದ್ಧವಾದದ್ದು ಎಂದು ಎಂದು ಸಾಹಿತಿ ಬಸವರಾಜ ಸೂಳಿಭಾವಿ ಆರೋಪಿಸಿದರು.

ಶನಿವಾರ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಸಾಹಿತ್ಯ, ಸಾಂಸ್ಕೃತಿಕ ಮತ್ತು ಪ್ರಾಧಿಕಾರದ ಮುಖ್ಯಸ್ಥರನ್ನು ಪಕ್ಷದ

ಕಚೇರಿಗೆ ಕರೆದು ಸಭೆ ಮಾಡುವುದರಲ್ಲಿ ತಪ್ಪಿಲ್ಲ ಎನ್ನುವುದಾದರೆ, ಸಚಿವ ಸಂಪುಟದ ಸಭೆಯನ್ನೂ ಪಕ್ಷದ ಕಚೇರಿಯಲ್ಲಿ ಮಾಡಲಿ ಎಂದು ಸವಾಲು ಹಾಕಿದರು.

ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಸಾಹಿತಿಗಳ ಸಭೆಯನ್ನು ಪಕ್ಷದ ಕಚೇರಿಯಲ್ಲಿ ಕರೆದಿರುವುದನ್ನು ಸಮರ್ಥಿಸಿಕೊಂಡಿದ್ದಲ್ಲದೇ, ಸಾಹಿತಿಗಳು ರಾಜಕಾರಣಿಗಳು ಎಂದಿರುವುದು ಸಾಂಸ್ಕೃತಿಕ ವಲಯಕ್ಕೆ ಮಾಡಿದ ಅವಹೇಳನವಾಗಿದೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಅವರು, ಇದು ಪಕ್ಷ ಸರಕಾರ, ಪಕ್ಷದ ಕಚೇರಿಗೆ ಸಾಹಿತಿಗಳ ಸಭೆ ಕರೆಯುವುದು ತಪ್ಪಲ್ಲ ಎಂದಿರುವುದು ಕಾಂಗ್ರೆಸ್ ಅಧಃಪತನಕ್ಕೆ ಇಳಿದಿರುವುದನ್ನು ಕಾಣಬಹುದು ಎಂದರು.

ಕಾಂಗ್ರೆಸ್ ಸಾಂಸ್ಕೃತಿಕ ವಲಯದ ಮೇಲೆ ರಾಜಕೀಯ ಹಿಡಿತ ಸಾಧಿಸಲು ಹೊರಟಿದೆ. ಇಷ್ಟೆಲ್ಲ ವಿವಾದಗಳಾದ ನಂತರವೂ ಅರ್ಥ ಮಾಡಿಕೊಂಡು ಸಚಿವ ಸಂಪುಟದ ಸಹೋದ್ಯೋಗಿಗಳಿಗೆ ತಿಳಿಹೇಳುವ ಕೆಲಸವನ್ನು ರಾಜ್ಯದ ಮುಖ್ಯಮಂತ್ರಿಗಳೂ ಮಾಡಿಲ್ಲ. ಇದೆಲ್ಲವನ್ನೂ ನೋಡಿದರೆ ಕಾಂಗ್ರೆಸ್ ಸಹ ನಿಧಾನವಾಗಿ ಸಂವಿಧಾನ ವಿರೋಧಿ ನೀತಿ ಅನುಸರಿಸುತ್ತಿದೆಯೇ ಎನ್ನುವ ಅನುಮಾನ ಮೂಡುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಶಂಕರಗೌಡ ಸಾತ್ಮಾರ, ಡಿ.ಎಂ. ಬಡಿಗೇರ, ಮುತ್ತು ಬಿಳೆಯಲಿ ಮುಂತಾದವರು ಉಪಸ್ಥಿತರಿದ್ದರು.

ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ
–ಸುಭಾಷಿತ

ಸಂಪಾದಕೀಯ

ಕುಮಾರಸ್ವಾಮಿ ಜನಪ್ರಿಯತೆ ಮತ್ತು ರಾಜ್ಯ ಬಿಜೆಪಿ ನಾಯಕರು

ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟ ಒಳ್ಳೆಯ ಫಲಿತಾಂಶವನ್ನೇ ನೀಡಿದೆ. ಮೈತ್ರಿಕೂಟದಿಂದಾಗಿ ಜೆಡಿಎಸ್ ಮತ್ತೊಮ್ಮೆ ಬಲವರ್ಧನೆ ಆಗಿದೆ. ಅದಕ್ಕಿಂತ ಮಿಗಿಲಾಗಿ ಬಿಜೆಪಿ ಅಭ್ಯರ್ಥಿಗಳ ಆಯ್ಕೆಯಲ್ಲಿ ಜೆಡಿಎಸ್ ಪಾತ್ರ ಪ್ರಮುಖವಾಗಿದೆ.

ಆ ಕಾರಣಕ್ಕಾಗಿಯೇ ಕೇಂದ್ರ ಮಂತ್ರಿಮಂಡಲದಲ್ಲಿ ಮಂಡ್ಯ ಕ್ಷೇತ್ರದಿಂದ ಆಯ್ಕೆಯಾದ ಕುಮಾರಸ್ವಾಮಿಯವರಿಗೆ ದೊಡ್ಡ ಖಾತೆಯನ್ನೇ ನೀಡಲಾಗಿದೆ. ಕುಮಾರಸ್ವಾಮಿ ಕೇಂದ್ರ ಮಂತ್ರಿ ಆಗುತ್ತಿದ್ದಂತೆ ಬಿಜೆಪಿ ರಾಷ್ಟ್ರೀಯ ನಾಯಕರ ನಿಕಟ ಸಂಪರ್ಕಕ್ಕೆ ಬಂದಿದ್ದಾರೆ.

ಹೀಗಾಗಿ ರಾಜ್ಯ ರಾಜಕಾರಣದಲ್ಲೂ ಕುಮಾರಸ್ವಾಮಿ ದಿನದಿಂದ ದಿನಕ್ಕೆ ಪ್ರಭಾವಿ ಯಾಗುತ್ತಲೇ ಸಾಗಿದ್ದಾರೆ. ಚನ್ನಪಟ್ಟಣ ವಿಧಾನಸಭೆ ಉಪಚುನಾವಣೆ ವಿಷಯವಾಗಿ ಕುಮಾರಸ್ವಾಮಿ ಈಗಾಗಲೇ ಅಮಿತ್ ಶಾ ಅವರನ್ನು ಭೇಟಿ ಮಾಡಿದ್ದಾರೆ. ರಾಜ್ಯದ ಬಿಜೆಪಿ ನಾಯಕರು ಚನ್ನಪಟ್ಟಣ ಕ್ಷೇತ್ರದ ಚರ್ಚೆ ನಡೆಸುವ ಮುನ್ನವೇ ಕುಮಾರಸ್ವಾಮಿ ಒಂದು ಹೆಜ್ಜೆ ಮುಂದೆ ಇಟ್ಟಿದ್ದಾರೆ.

ಇದು ರಾಜ್ಯ ಬಿಜೆಪಿ ನಾಯಕರಿಗೆ ಇರಿಸು ಮುರಿಸು ತಂದಿದೆ. ಕುಮಾರಸ್ವಾಮಿ ಇದೇ ರೀತಿ ರಾಷ್ಟ್ರೀಯ ನಾಯಕರಿಗೆ ಅತ್ಯಪ್ತರಾಗುತ್ತಾ ಸಾಗಿದರೆ, ರಾಜ್ಯ ರಾಜಕಾರಣದಲ್ಲಿ ಕುಮಾರಸ್ವಾಮಿಯೇ ನಂಬರ್ ಒನ್ ಆಗುತ್ತಾರೆ ಎನ್ನುವ ಭಯ ಶುರುವಾಗಿದೆ.

ಸದ್ಯ ರಾಜ್ಯ ರಾಜಕಾರಣದಲ್ಲಿರುವ ಬಿಜೆಪಿ ನಾಯಕರ ಪೈಕಿ ಯಾರೊಬ್ಬರೂ ಹೈಕಮಾಂಡ್ ಆಶಯದಂತೆ ಫಲಿತಾಂಶ ಕೊಡಲು ಸಾಧ್ಯವಾಗಿಲ್ಲ. ಆದರೆ ಆ ಕೆಲಸವನ್ನ ಕುಮಾರಸ್ವಾಮಿ ಮತ್ತು ಜೆಡಿಎಸ್ ಪಕ್ಷ ಮಾಡಿದೆ. ಹೀಗಾಗಿ ಮುಂದಿನ ದಿನಗಳಲ್ಲಿ ನಡೆಯುವ ಉಪಚುನಾವಣೆಯಲ್ಲಿ ಮೈತ್ರಿ ಧರ್ಮ ಪಾಲನೆಯಲ್ಲಿ ಈ ಬಾರಿ ಕುಮಾರಸ್ವಾಮಿ ಪ್ರಾಬಲ್ಯ ತುಸು ಹೆಚ್ಚಾಗಲಿದೆ. ರಾಷ್ಟ್ರೀಯ ಪಕ್ಷದ ನಾಯಕರು ಎರಡು ಸೀಟು ಗೆದ್ದ ಪಕ್ಷದ ಮುಂದೆ ಮಂಡಿಯೂರಬೇಕಾದ ರಾಜಕೀಯ ಸ್ಥಿತಿ ನಿರ್ಮಾಣವಾಗಲಿದೆ.

ಅಡವೀಂದ್ರ ಸ್ವಾಮಿಮಠದ ಶಿವಾನುಭವ ಸಮಿತಿ ನೂತನ ಪದಾಧಿಕಾರಿಗಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಅಡವೀಂದ್ರ ಸ್ವಾಮಿಮಠದ ಶಿವಾನುಭವ ಸಮಿತಿಯ ನೂತನ ಪದಾಧಿಕಾರಿಗಳನ್ನು ಇತ್ತೀಚೆಗೆ ಶ್ರೀಮಠದ ಧರ್ಮದರ್ಶಿ ಮಹೇಶ್ವರ ಸ್ವಾಮೀಜಿ ಹೊಸಳ್ಳಿಮಠ ಅವರ ಸಾನ್ನಿಧ್ಯದಲ್ಲಿ ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ಡಾ. ಎಸ್.ಕೆ. ನಾಲತ್ವಾಡಮಠ, ಪ್ರಧಾನ ಕಾರ್ಯದರ್ಶಿಯಾಗಿ ಬಿ.ಬಿ. ತೋಟಿಗೇರ, ಸಾಂಸ್ಕೃತಿಕ ಕಾರ್ಯದರ್ಶಿಯಾಗಿ ವಿನಾಯಕ ಸಜ್ಜನ, ಕೋಶಾಧ್ಯಕ್ಷರಾಗಿ ಯು.ಆರ್. ಭೂಸನೂರಮಠ ಅವರು ಆಯ್ಕೆಯಾಗಿದ್ದಾರೆ.

ಸಮಿತಿಯ ಸದಸ್ಯರಾಗಿ ಬಿ.ಎಂ. ಬಿಳೆಯಲಿ, ಪ್ರೊ. ಕೆ.ಎಚ್. ಬೇಲೂರ, ಎಸ್.ಎಸ್. ಪಾಟೀಲ, ಎಲ್.ಎಸ್. ನೀಲಗುಂದ, ಜಿ.ಎಂ. ಯಾನಮಶೆಟ್ಟಿ, ಬಿ.ಎಚ್. ಗರಡಿಮನಿ, ಬಸವರಾಜ ಸಂಕನೂರ, ನಿಂಗಪ್ಪ ಬಳಿಗಾರ, ಡಾ.ರಾಜೇಂದ್ರ ಗಡಾದ, ಬಸವರಾಜ ಗಿಡ್ನಂದಿ, ಐ.ಕೆ. ಬಲೂಚಗಿ, ಆರ್.ಎಫ್. ಅಗಸಿಮನಿ, ಜಿ.ಎಫ್. ಬಿದರಿ, ಬಿ.ಎಲ್. ಹೊಸಳ್ಳಿಮಠ, ವ್ಹಿ.ಎಂ. ಕುಂದ್ರಾಳಹಿರೇಮಠ, ಪ್ರೊ. ಬಿ.ಬಿ. ಪಾಟೀಲ, ಪಿ.ಬಿ. ಬಂಡಿ, ಸಿದ್ಧಣ್ಣ ಜವಳಿ, ಮಾರುತಿ ಹೆಬ್ಬಾರೆ, ಎಂ.ಕೆ. ಹೊಂಬಾಳಿಮಠ, ಸಿ.ಬಿ. ಹಿರೇಮಠ, ಜಿ.ಬಿ. ನಿಡಗುಂದಿ, ಪ್ರಭುಗೌಡ ಪಾಟೀಲ, ಕುಮಾರಸ್ವಾಮಿ ಹಿರೇಮಠ, ಫಕೀರಯ್ಯ ಹಿರೇಮಠ, ಬಿ.ವ್ಹಿ. ಹುಡೇದ ಆಯ್ಕೆಯಾಗಿದ್ದಾರೆ.

ಮಹಿಳಾ ಸಮಿತಿಯ ಸದಸ್ಯರಾಗಿ ಸುಶೀಲಾ ಕೋಟಿ, ಯಶೋದಾ ಗಿಡ್ನಂದಿ, ಪ್ರಮೀಳಾದೇವಿ ಬಳಿಗಾರ, ಶಾಂತಾ ಬಾಕಳೆ, ಮಂಗಲಾ ಯಾನಮಶೆಟ್ಟಿ, ಶಾಂತಾ ಸಂಕನೂರ, ಕಸ್ತೂರಿ ಭಾಂಡಗೆ, ಗೀತಾ ಹೂಗಾರ ಆಯ್ಕೆಯಾಗಿದ್ದಾರೆ.

ತೈಲ ದರ ಇಳಿಕೆ ಮಾಡಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿಗಳನ್ನು ಟೀಕಿಸುತ್ತಾ ಅಧಿಕಾರಕ್ಕೇರಿದ ಕಾಂಗ್ರೆಸ್ ನೇತೃತ್ವದ ರಾಜ್ಯ ಸರಕಾರವು ಪೆಟ್ರೋಲ್, ಡೀಸೆಲ್ ಬೆಲೆಯನ್ನು ಏರಿಸಿದ್ದು ಖಂಡನಾರ್ಹ. ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಕಂಗೆಟ್ಟಿರುವ ಕನ್ನಡ ನಾಡ ಜನತೆಗೆ ಗಾಯದ ಮೇಲೆ ಬರೆ ಎಳೆದಂತಾಗಿದೆ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಕರ್ನಾಟಕ ರಾಜ್ಯಾಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಹೇಳಿದ್ದಾರೆ.

ಅವರು ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿ, ಸಂಕಷ್ಟದಿಂದ ಕೂಡಿದ ಜನತೆಗೆ ಗ್ಯಾರಂಟಿ ಯೋಜನೆಗಳ ಮೂಲಕ ಸ್ವಲ್ಪ ನೆಮ್ಮದಿ ನೀಡಿದ್ದ ಸರ್ಕಾರ, ಲೋಕಸಭಾ ಚುನಾವಣೆ ಮುಗಿದ ತಕ್ಷಣ ಪೆಟ್ರೋಲ್, ಡೀಸೆಲ್ ಬೆಲೆ ಏರಿಸಿರುವುದು ನಾಡಿನ ಜನತೆಗೆ ಬಗೆದ ದ್ರೊಹವಾಗಿದೆ. ಆದ್ದರಿಂದ ರಾಜ್ಯ ಸರಕಾರ ತಕ್ಷಣ ಸ್ಪಂದಿಸಿ ಪೆಟ್ರೋಲ್, ಡೀಸೆಲ್ ದರ ಇಳಿಕೆ ಮಾಡುವ ಮೂಲಕ ಜನತೆಯ ಹಿತವನ್ನು ಕಾಪಾಡಲು ಮುಂದಾಗಬೇಕೆಂದು ಅವರು ಸರಕಾರವನ್ನು ಆಗ್ರಹಿಸಿದ್ದಾರೆ.

ಕ್ರಿಯಾಶೀಲ ವ್ಯಕ್ತಿತ್ವ, ಮಾನವೀಯ ಅನುಕಂಪದ ಅಜ್ಜ ಡಾ. ವೀರಪ್ಪ ಸಂಕನೂರ

ಕಾಯಕನಿಷ್ಠೆಯ ಕರ್ಮಯೋಗಿಯ ನೆನೆದು...

'ಇರುವ ಕೆಲಸವ ಮಾಡು ಕಿರಿದೆನೆದ ಮನವಿಟ್ಟು
ದೊರೆತುದ ಪ್ರಸಾದವಂದುಣ್ಣ ಗೊಣಗಿಡದೆ
ಧರಿಸು ಲೋಕದ ಭರವ ಪರಮಾರ್ಥವನು ಬಿಡದೆ
ಹೊರಡು ಕರೆ ಬರಲು ಅಳದೆ ಮಂಕುತಿಮ್ಮ'
– ಡಿ.ವಿ.ಜಿ

ನಮ್ಮ ಪಾಲಿನ ಕಾಯಕವನ್ನು ಸಮರ್ಪಣಾ ಮನೋಭಾವಂದಿದ ಮಾಡಬೇಕು. ಅದರಿಂದ ಬರುವ ಪ್ರಸಾದವನ್ನು ಗೊಣಗದೆ ಸ್ವೀಕರಿಸಬೇಕು. ಸೇವೆಯಲಿ ಪಾರಮಾರ್ಥಿಕ ಭಾವ, ಸ್ಥಿತಪ್ರಜ್ಞೆತೆ ಇರಬೇಕು. ಸಾವೆಂಬ ಕೊನೆಕರ ಬಂದಾಗ ನೆಗತು ನಡೆಯಬೇಕು. ಹೀಗೆ ಡಿವಿಜಿಯವರ ವಾಣಿಯಂತೆ ಅರ್ಥಪೂರ್ಣವಾದ, ಕಾಯಕನಿಷ್ಠೆಯ ವೈದ್ಯವೃತ್ತಿಯನ್ನು ಸೇವಾಮನೋಭಾವದೊಂದಿಗೆ ನಡೆಸಿ ನಮ್ಮಿಂದ ದೂರವಾದವರು ಅಂತಃಕರಣದ ಅಜ್ಜ ಡಾ. ವೀರಪ್ಪ ಸಂಕನೂರವರು.

ವೈದ್ಯಾಚಾರ್ಯ, ಕೃಷಿಕ, ಶಿಕ್ಷಣ ಪ್ರೇಮಿ ಎಲ್ಲಕ್ಕಿಂತ ಮಿಗಿಲಾಗಿ ಸೇವಾ ಮನೋಭಾವದ ಸ್ನೇಹಜೀವಿ ತಮ್ಮ ಶತಕದ ಸಾರ್ಥಕಜೀವನ ನಡೆಸಿ 14-06-2024ರಂದು ಭೌತಿಕವಾಗಿ ನಮ್ಮನ್ನಗಲಿದರೂ, ಅವರ ಪ್ರೀತಿ ಮಾನವೀಯ ಕಳಕಳಿಯ ವ್ಯಕ್ತಿತ್ವ ಅವರ ಬಂಧು-ಬಾಂಧವರು, ಒಡನಾಡಿಗಳ ಹೃನ್ಮನಗಳಲ್ಲಿ ಶಾಶ್ವತವಾಗಿ ನೆಲೆಸಿದೆ.

ನಿಡಗುಂದಿಯ ಸುಸಂಸ್ಕೃತ ಸಂಕನೂರ ಕುಟುಂಬದಲ್ಲಿ 1925ರಲ್ಲಿ ಜನಿಸಿದ ವೀರಪ್ಪ ಪರಪ್ಪ ಸಂಕನೂರ ಒಂದೂವರೆ ವರ್ಷದಲ್ಲಿರುವಾಗಲೇ ತಾಯಿ ಬಸಮ್ಮನನ್ನು ಕಳೆದುಕೊಂಡರು. ಹೆಣ್ಣಜ್ಜಿ ವೀರಬಸಮ್ಮನವರ ಪ್ರೀತಿ-ಆರೈಕೆಯಲ್ಲಿ ಬೆಳೆದು ಮುಲ್ಕಿ ಪರೀಕ್ಷೆ ಪಾಸಾದ ನಂತರ ಗಜೇಂದ್ರಗಡದ ಡಾ. ವಿ.ಎಮ್. ಮಾಳಗಿಯ ಆಯುರ್ವೇದ ಆಸ್ಪತ್ರೆಯಲ್ಲಿ ಕೆಲಕಾಲ ಸೇವೆ ಸಲ್ಲಿಸಿ ವೈದ್ಯಕೀಯ ವೃತ್ತಿಯ ಬಗೆಗೆ ವಿಶೇಷ ಆಸಕ್ತಿ ಬೆಳೆಸಿಕೊಂಡರು. ಹಿತೈಷಿಗಳ ಸಲಹೆಯಂತೆ ಬೆಳಗಾವಿಗೆ ತೆರಳಿ ಅಲ್ಲಿ ನಾಗನೂರ ಮಠದ ಬೋರ್ಡಿಂಗ್‌ನಲ್ಲಿ ಪ್ರಸಾದ ಸ್ವೀಕರಿಸಿ, ಶಿವಬಸವ ಸ್ವಾಮೀಜಿಯವರ ಕೃಪಾಶೀರ್ವಾದದಿಂದ ಎರಡು ವರ್ಷಗಳಲ್ಲಿ ಟಿ.ಸಿ.ಎಚ್. ಹಾಗೂ ಆಯುರ್ವೇದ ವೈದ್ಯಾಚಾರ್ ಶಿಕ್ಷಣ ಪಡೆದು 1949ರಲ್ಲಿ ನಿಡಗುಂದಿಗೆ ಮರಳಿದರು.

ನರೇಗಲ್ಲಿನ ಗಚ್ಚಿನಮಠಶಾಸ್ತ್ರಿ ಹಾಗೂ ಡಾ. ಕೋರಧ್ಯಾನಮಠದಲ್ಲಿ ಕೆಲ ತಿಂಗಳುಗಳ ಕಾಲ ವೈದ್ಯಕೀಯ ವೃತ್ತಿ ತರಬೇತಿ ಪಡೆದು ಸ್ವಗ್ರಾಮ ನಿಡಗುಂದಿಯಲ್ಲಿ 'ಕುಮಾರ ವಿಜಯ ಹಾಸ್ಪಿಟಲ್'ನ್ನು ಪ್ರಾರಂಭಿಸಿದರು. ಸೌಲಭ್ಯಗಳಿಲ್ಲದ ಅಂದಿನ ದಿನಮಾನಗಳಲ್ಲಿ ಡಾ. ವೀರಪ್ಪನವರು ವೈದ್ಯಕೀಯ ವೃತ್ತಿಯನ್ನು ವ್ಯವಹಾರವಲ್ಲ ಸೇವಾ ಕಾಯಕವೆಂದು ಸ್ವೀಕರಿಸಿದರು. ತಮ್ಮ ಸದ್ವಿನಯ, ಭರವಸೆ ಮಾತು ಉಪಚಾರಗಳಿಂದ ರೋಗಿಗಳಿಗೆ ಪರಿಣಾಮಕಾರಿ ಚಿಕಿತ್ಸೆ ನೀಡಿ ಅವರಲ್ಲಿ ಆತ್ಮಸ್ಥೈರ್ಯ ತುಂಬಿ ಅವರನ್ನು ಬಹುಬೇಗ ಗುಣಮುಖರನ್ನಾಗಿಸುತ್ತಿದ್ದರು.

ಡಾ. ವೀರಪ್ಪ ಸಂಕನೂರವರು ಟಿ.ಸಿ.ಎಚ್. ಕಲಿತಿದ್ದರಿಂದ ಪ್ರಾಥಮಿಕ ಶಾಲಾ ಶಿಕ್ಷಕರಾಗಿ ಕಾರ್ಯ ನಿರ್ವಹಿಸಲು ಸರಕಾರದಿಂದ ಆದೇಶ ಬಂದಿತು. ಆದರೆ ಅವರು ಅದನ್ನು ನಿರಾಕರಿಸಿ ತಮ್ಮ ಪ್ರೀತಿಯ ಸೇವೆಗೆ ಹೆಚ್ಚಿನ ಅವಕಾಶವಿರುವ ವೈದ್ಯ ವೃತ್ತಿಯಲ್ಲಿಯೇ ಮುಂದುವರೆದರು. ಅಂದಿನ ಕಾಲದಲ್ಲಿ ಗ್ರಾಮೀಣ ಭಾಗದಲ್ಲಿನ ಬಡಜನತೆಗೆ ಆರೋಗ್ಯದ ಕುರಿತು ಕಾಳಜಿ ಕಡಿಮೆ. ಅಂತಹದರಲ್ಲಿ ಡಾ. ಸಂಕನೂರವರು ಅನಾರೋಗ್ಯದ ಸುದ್ದಿ ತಿಳಿದರೆ ಸಾಕು ತಾವೇ ರೋಗಿಗಳ ಮನೆ ಬಾಗಿಲಿಗೆ ಹೋಗಿ ಚಿಕಿತ್ಸೆ, ಔಷಧಿ ನೀಡಿ ಬರುವ ಪರಿಪಾಠ ರೂಢಿಸಿಕೊಂಡರು. ಬಹುಬೇಗನೆ ಡಾ. ವೀರಪ್ಪನವರ ಕೈಗುಣ ಸುತ್ತಮುತ್ತಲಿನ ಗ್ರಾಮಗಳಲ್ಲಿ ಮನೆಮಾತಾಯಿತು. ರೋಗಿಗಳಿಗೆ ನಿಜವಾದ ಅರ್ಥದಲ್ಲಿ 'ವೈದ್ಯೋ ನಾರಾಯಣೋ ಹರಿ' ಎಂಬಂತಾದರು.

ಡಾ. ವೀರಪ್ಪನವರು ನಿಡಗುಂದಿ, ಮಾರನಬಸರಿ, ನಲ್ಲೂರು, ಹಾಲಕೇರಿ ಮುಂತಾದ ಗ್ರಾಮಗಳಲ್ಲಿ ಸಲ್ಲಿಸುತ್ತಿದ್ದ ನಿಸ್ವಾರ್ಥ ಸೇವೆಯನ್ನು ಗಮನಿಸಿದ ಹಾಲಕೇರಿಯ ಬೆತ್ತದ ಅಜ್ಜನವರೆಂದೇ ಪ್ರಸಿದ್ಧಿ ಪಡೆದ ಪೂಜ್ಯ ಅನ್ನದಾನ ಮಹಾಸ್ವಾಮಿಗಳು ಹಾಗೂ ನಿಡಗುಂದಿಕೊಪ್ಪದ ಪೂಜ್ಯ ಚನ್ನಬಸವ ಸ್ವಾಮಿಜಿಯವರ ಸಂಕನೂರ ವೈದ್ಯರನ್ನು ಬೆನ್ನುತಟ್ಟಿ ಪ್ರೋತ್ಸಾಹಿಸಿದರು. ಅವರ ಆಪೇಕ್ಷೆ, ಮಾರ್ಗದರ್ಶನದಂತೆ ಡಾ. ವೀರಪ್ಪನವರು 1951ರಲ್ಲಿ ಹಾಲಕೇರಿಯಲ್ಲಿ 'ಕುಮಾರ ವಿಜಯ ಚಿಕಿತ್ಸಾಲಯ'ವನ್ನು ಪ್ರಾರಂಭಿಸಿದರು. ಆಧುನಿಕ ವೈದ್ಯಕೀಯ ತಾಂತ್ರಿಕ ಸಲಕರಣೆ, ಸೌಲಭ್ಯಗಳಿಲ್ಲದ ಅಂದಿನ ಕಾಲದಲ್ಲಿ ಹೆಣ್ಣುಮಕ್ಕಳು ಆತಂಕ ಗಾಬರಿಯಾಗದಂತೆ ಸರಾಗವಾಗಿ ಹೆರಿಗೆ ಮಾಡಿಸುತ್ತಿದ್ದರು.

ಒಬ್ಬ ಉತ್ತಮ ವೈದ್ಯರಾಗಿರುವದರೊಂದಿಗೆ ಡಾ. ವೀರಪ್ಪನವರು ಪ್ರಗತಿಪರ ರೈತರಾಗಿದ್ದರು. 38 ಎಕರೆ ಹೊಲವನ್ನು ಖರೀದಿಸಿ ಅಲ್ಲಿ ರೈತರ ಸಹಾಯದೊಂದಿಗೆ ಉತ್ತಮ ಕೃಷಿಕಾರ್ಯ ಕೈಗೊಂಡರು. ನಿರಂತರ ಪರಿಶ್ರಮದಿಂದ ಕಮತ ಮಾಡಿ 120 ಎಕರೆ ಹೊಲದ ಒಡೆಯರಾದರು.

ವೈದ್ಯರು ಹಾಗೂ ಕೃಷಿಕರಾಗಿರುವುದರೊಂದಿಗೆ ಶಿಕ್ಷಣ ಪ್ರೇಮಿಗಳಾದ ಇವರು ಅಕ್ಷರ ಪೋಷಕರಾಗಿದ್ದಾರೆ. ಸ್ವಗ್ರಾಮ ನಿಡಗುಂದಿಯಲ್ಲಿ ಸರ್ಕಾರಿ ಪಿಯು ಕಾಲೇಜಿನ ಕಟ್ಟಡ ನಿರ್ಮಾಣಕ್ಕೆ ತಮ್ಮ ಬೆಲೆಬಾಳುವ 3 ಎಕರೆ ಜಮೀನನ್ನು ದಾನವಾಗಿ ನೀಡಿದ್ದಾರೆ. ನಿಡಗುಂದಿ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆ ಪ್ರಧಾನ ಕಾರ್ಯದರ್ಶಿಯಾಗಿ, ನರೇಗಲ್ಲದ ಶ್ರೀ ಅನ್ನದಾನ ವಿಜಯ ವಿದ್ಯಾಪ್ರಸಾರಕ ಸಮಿತಿ ಸದಸ್ಯರಾಗಿ ಶೈಕ್ಷಣಿಕ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ್ದಾರೆ.

ಅವರ ಪ್ರಥಮ ಸುಪುತ್ರರಾದ ವಿಧಾನ ಪರಿಷತ್ ಸದಸ್ಯರಾದ ಪ್ರೊ. ಎಸ್.ವಿ. ಸಂಕನೂರವರು ತಂದೆಯ ಮಾರ್ಗದರ್ಶನದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸುತ್ತಾ ಬಂದಿದ್ದಾರೆ. ಅದರಂತೆ ಡಾ. ಸಂಗಪ್ಪ, ಇಂಜಿನಿಯರ್ ಶರಣಪ್ಪ, ಪ್ರೊ. ಸುಭಾಶ್ಚಂದ್ರ, ಬ್ಯಾಂಕ್ ಮ್ಯಾನೇಜರ್ ಅಂದಪ್ಪ ಇವರುಗಳು ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ.

ಶತಾಯುಷಿ ಡಾ. ವೀರಪ್ಪ ಸಂಕನೂರ ಇಂದು ನಮ್ಮೊಂದಿಗಿಲ್ಲ. ಆದರೆ ವೈದ್ಯಕೀಯ, ಕೃಷಿ, ಶಿಕ್ಷಣ ಕ್ಷೇತ್ರದಲ್ಲಿ ಸಾಧನೆಗೈದು, ತಮ್ಮ ಶ್ರಮಜೀವನ, ಕ್ರಿಯಾಶೀಲ ವ್ಯಕ್ತಿತ್ವ ಮತ್ತು ಮಾನವೀಯ ಅನುಕಂಪದ ಮೂಲಕ ಯುವಜನತೆಗೆ ಅನುಕರಣೀಯ, ಆದರ್ಶಪ್ರಾಯರಾಗಿದ್ದಾರೆ.

– ಡಾ. ದತ್ತಪ್ರಸನ್ನ ಪಾಟೀಲ.

ಯೋಗ ಸಮಚಿತ್ತದ ಅದ್ಭುತ ಮಾರ್ಗ

■ ವಿಜಯಸಾಕ್ಷಿ ಸುದ್ದಿ, ಗದಗ

ಯೋಗವು ಮಾನಸಿಕ, ದೈಹಿಕ ಸಾಮರ್ಥ್ಯದ ಜೊತೆಗೆ ಭಾವನಾತ್ಮಕ ಸಮಚಿತ್ತತೆಯನ್ನು ತಂದುಕೊಡುವ ಅದ್ಭುತ ಮಾರ್ಗ ಎಂದು ಪ್ರಖ್ಯಾತ ಯೋಗಸಾಧಕ ಡಾ.ಸತೀಶ ಹೊಂಬಾಳಿ ಅಭಿಪ್ರಾಯಪಟ್ಟರು.



ನಗರದ ಸನ್ಮಾರ್ಗ ಪದವಿಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ವಿಶ್ವ ಯೋಗ ದಿನಾಚರಣೆಯ ಸಂದರ್ಭದಲ್ಲಿ ಯೋಗದ ಮಹತ್ವ ತಿಳಿಸಿ ಅವರು ಮಾತನಾಡಿದರು.

ಸ್ಟುಡೆಂಟ್ ಎಜುಕೇಶನ್ ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ ಮಾತನಾಡಿ, ಸಹಸ್ರಾರು ವರ್ಷಗಳ ಭವ್ಯ ಸಂಸ್ಕೃತಿ ಹಾಗೂ ಶ್ರೇಷ್ಠ ಇತಿಹಾಸ ಹೊಂದಿದ ಭಾರತ ಸಮಗ್ರ ಪ್ರಪಂಚಕ್ಕೆ ನೀಡಿದ ಮಹಾನ್ ಕೊಡುಗೆಗಳಲ್ಲಿ ಯೋಗವೂ ಒಂದು. ಪತಂಜಲಿ ಮಹರ್ಷಿಯಿಂದ ಪ್ರಚುರವಾದ ಅಷ್ಟಾಂಗ ಯೋಗ ಕೇವಲ ಆಧ್ಯಾತ್ಮಿಕ ಮೊತ್ತದಲ್ಲಿ ದೈಹಿಕ ಹಾಗೂ ಮಾನಸಿಕ ಸ್ವಾಸ್ಥ್ಯಕ್ಕೆ ಮೂಲ ಸೂತ್ರವಾಗಿದೆ ಎಂದರು.

ದಿನಾಚರಣೆಯ ಮಹತ್ವವನ್ನು ತಿಳಿಸುತ್ತ ಪ್ರೊ.ಪ್ರೇಮಾನಂದ ರೋಣದ ಮಾತನಾಡಿ, ಯೋಗವು ನಿಮ್ಮ ಮನಸ್ಸು ಮತ್ತು ದೇಹವನ್ನು ಪುನರುಜ್ಜೀವನಗೊಳಿಸುವ ಸಾಮರ್ಥ್ಯವನ್ನು ಹೊಂದಿದೆ. ಪ್ರತಿದಿನ ಯೋಗ ಮಾಡುವವರು ಯೋಗದ ಅವಧಿಯ ನಂತರ ಚೈತನ್ಯವನ್ನು ಅನುಭವಿಸುತ್ತಾರಲ್ಲದೇ ಅನಗತ್ಯ ಉದ್ವೇಗ, ಅಶಾಂತಿಯನ್ನು ದೂರಿಕರಿಸಲು ಸಹಾಯ ಮಾಡುತ್ತದೆ ಎಂದರು.

ಈ ಸಂದರ್ಭದಲ್ಲಿ ಸಂಸ್ಥೆಯ ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ. ರೋಹಿತ ಒಡೆಯರ್, ಪ್ರೊ. ರಾಹುಲ ಒಡೆಯರ್, ಪ್ರೊ. ಪುನೀತ ದೇಶಪಾಂಡೆ, ಪ್ರೊ. ಸೈಯ್ಯದ್ ಮತಿನ್ ಮುಲ್ಲಾ, ಸರ್ವ ಸಿಬ್ಬಂದಿವರ್ಗ, ವಿದ್ಯಾರ್ಥಿ ವೃಂದದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಸಂಸ್ಥೆ ರೂಪಿಸಿದ 'ಯೋಗದೀಪಕೆ' ಎಂಬ ಕಿರುಹೊತ್ತಿಗೆಯನ್ನು ಲೋಕಾರ್ಪಣೆಗೊಳಿಸಿ ವಿದ್ಯಾರ್ಥಿಗಳಿಗೆ ವಿತರಿಸಲಾಯಿತು. ಕಾರ್ಯಕ್ರಮ ನಿರೂಪಣೆ ಹಾಗೂ ಸ್ವಾಗತವನ್ನು ಪ್ರೊ.ರಾಹುಲ ಒಡೆಯರ್ ನಿರ್ವಹಿಸಿದರು. ಪ್ರೊ. ಎಂ.ಪಿ. ಸಂಕನೂರ ವಂದಿಸಿದರು.

ದೃಶ್ಯಕಲಾ ವಿದ್ಯಾರ್ಥಿಗಳ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಆರ್ಟ್ ಮ್ಯಾಟರ್ಸ್ ಬೆಂಗಳೂರು ಹಾಗೂ ಸೃಷ್ಟಿ ಇನೋವೇಷನ್ ಎಕ್ಸೇಂಜ್ ಇವುಗಳ ಸಹಯೋಗದಲ್ಲಿ 'ಆರ್ಟ್ ಮತ್ತು ಡಿಸೈನ್ ಸಮ್ಮಿಟ್' ಕಾರ್ಯಕ್ರಮ ಬೆಂಗಳೂರಿನಲ್ಲಿ ಮೂರು ದಿನಗಳ ಕಾಲ ಇತ್ತೀಚೆಗೆ ನೆರವೇರಿತು.

ಕಾರ್ಯಕ್ರಮದಲ್ಲಿ ಗದುಗಿನ ವಿಜಯ ಲಲಿತ ಕಾಲೇಜಿನಿಂದ ಬಿ.ವಿ.ಎ ಮತ್ತು ಎಮ್.ವಿ.ಎ ವಿದ್ಯಾರ್ಥಿಗಳು ವಿಜಯ ಲಲಿತ ಕಲಾ ಕಾಲೇಜಿನ ಚಿತ್ರಕಲಾ ಉಪನ್ಯಾಸಕ ಬಸವಸರಾಜ ಕುಪ್ಪಿ ಮಾರ್ಗದರ್ಶನದಲ್ಲಿ ಭಾಗವಹಿಸಿದ್ದರು. ವಿದ್ಯಾರ್ಥಿಗಳಾದ ರಾಘವೇಂದ್ರ ಆಚಾರ

ಮಾರನಬಸರಿ ಸ.ಹಿ.ಪ್ರಾ ಶಾಲೆಗೆ 1 ಲಕ್ಷ ರೂ ದೇಣಿಗೆ ಘೋಷಿಸಿದ ಆರ್.ಬಿ. ಪ್ರಭಣ್ಣವರ

ನಿವೃತ್ತ ಶಿಕ್ಷಕನ ಕಾರ್ಯಕ್ಕೆ ಮೆಚ್ಚುಗೆ

■ ವಿಜಯಸಾಕ್ಷಿ ಸುದ್ದಿ, ರೋಣ

ಇಲ್ಲಿನ ಮಾರನಬಸರಿ ಗ್ರಾಮದ ಸಹಿಪ್ರಾ ಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಆರ್.ಬಿ. ಪ್ರಭಣ್ಣವರ ಮಕ್ಕಳ ಶೈಕ್ಷಣಿಕ ಚಟುವಟಿಕೆಗಳ ಪ್ರಗತಿಗಾಗಿ ಶಾಲೆಗೆ 1 ಲಕ್ಷ ರೂಗಳ ದೇಣಿಗೆಯನ್ನು ಘೋಷಿಸಿ, ಶಿಕ್ಷಕ ವೃತ್ತಿಯ ಗೌರವವನ್ನು ಮತ್ತಷ್ಟು ಹೆಚ್ಚಿಸಿದ್ದು ಗ್ರಾಮಸ್ಥರ ಮೆಚ್ಚುಗೆಗೆ ಕಾರಣವಾಗಿದೆ.

ಮಾರನಬಸರಿ ಗ್ರಾಮದಿಂದ ಅನತಿ ದೂರದಲ್ಲಿರುವ ಹಾಲಕೇರಿ ಗ್ರಾಮದ ಶಿಕ್ಷಕ ಆರ್.ಬಿ. ಪ್ರಭಣ್ಣವರ ಮಾರನಬಸರಿ ಗ್ರಾಮದ ಸಹಿಪ್ರಾ ಶಾಲೆಗೆ ಜೂ 8, 2006ರಿಂದ ಶಿಕ್ಷಕರಾಗಿ ಸೇವೆಯನ್ನು ಸಲ್ಲಿಸಿ, ಶಾಲೆಯ ಪ್ರಭಾರಿ ಮುಖ್ಯೋಪಾಧ್ಯಾಯರಾಗಿಯೂ ತಮ್ಮ ಕರ್ತವ್ಯವನ್ನು ನಿಭಾಯಿಸಿ ನಿವೃತ್ತರಾಗಿದ್ದಾರೆ. ಹಾಗೆ ಶಾಲಾ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಶ್ರಮಿಸಿದ ಇವರು ಶಾಲಾ ಮಕ್ಕಳ ಪ್ರತಿಭೆಯನ್ನು ರಾಷ್ಟ್ರಮಟ್ಟದಲ್ಲಿ ಕೂಡ ಅನಾವರಣಗೊಳಿಸಿದ್ದಾರೆ.

ಆರ್.ಬಿ. ಪ್ರಭಣ್ಣ ತಮ್ಮ ನಿವೃತ್ತಿಯ ಸಂದರ್ಭದಲ್ಲಿ ಶಾಲಾ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ 1 ಲಕ್ಷ ರೂಗಳನ್ನು ಘೋಷಣೆ ಮಾಡಿದ್ದು, ಅದರಿಂದ ಬರುವ ಬಡ್ಡಿ ಹಣದಲ್ಲಿ ಮಕ್ಕಳಿಗೆ ಪೂರಕವಾದ ವಾತವರಣ ನಿರ್ಮಿಸಿ ಶಾಲೆಯನ್ನು ಅಭಿವೃದ್ಧಿಪಡಿಸಿ ಎಂದು ತಿಳಿಸಿರುವುದು ಅವರು ಶಾಲಾ ಮಕ್ಕಳ ಮೆಲೆ ಇಟ್ಟಿರುವ ಪ್ರೀತಿಗೆ ಸಾಕ್ಷಿಯಾಗಿದೆ. ಇವರ ಕಾರ್ಯಕ್ಕೆ ಶಾಸಕ ಜಿ.ಎಸ್. ಪಾಟೀಲ ಕೂಡ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

ಶಾಲೆಯ ಶಿಕ್ಷಕ ಎಸ್.ಇ. ಹೊರಪೇಟಿ ಈ ಬಗ್ಗೆ ಪ್ರತಿಕ್ರಿಯಿಸಿ, ನಮ್ಮ ಶಾಲೆಯಲ್ಲಿ ಕರ್ತವ್ಯ ನಿಭಾಯಿಸಿ ನಿವೃತ್ತರಾದ ಆರ್.ಬಿ. ಪ್ರಭಣ್ಣವರ ಶಾಲೆಯ ಮಕ್ಕಳ ಶೈಕ್ಷಣಿಕ ಹಾಗೂ ಶಾಲಾ ಅಭಿವೃದ್ಧಿಗಾಗಿ 1 ಲಕ್ಷ ರೂ.ಗಳ ದೇಣಿಗೆಯನ್ನು ಘೋಷಿಸಿದ್ದಾರೆ. ಹಾಗೆ ಬ್ಯಾಂಕ್ ಖಾತೆಯಿಂದ ಬರುವ ಬಡ್ಡಿ ಹಣದಲ್ಲಿ ಶಾಲೆಯ ಪ್ರಗತಿಗೆ ಬಳಕೆ ಮಾಡಿಕೊಳ್ಳಿ ಎಂದು ತಿಳಿಸಿರುವುದು ಸ್ವಾಗತರ್ಹವಾಗಿದೆ ಎಂದಿದ್ದಾರೆ.

ಆರ್.ಬಿ. ಪ್ರಭಣ್ಣವರ ತಾವು ಕರ್ತವ್ಯ ನಿರ್ವಹಿಸಿದ ಶಾಲೆ ಹಾಗೂ ಶಾಲಾ ಮಕ್ಕಳು ಶೈಕ್ಷಣಿಕ ಚಟುವಟಿಕೆಯಲ್ಲಿ ಪ್ರಗತಿಯನ್ನು ಸಾಧಿಸಲಿ ಎಂದು 1 ಲಕ್ಷ ರೂಗಳ ದೇಣಿಗೆಯನ್ನು ನೀಡಿದ್ದು ನಿಜಕ್ಕೂ ಅಭಿನಂದನಾರ್ಹವಾಗಿದ್ದು, ಅವರ ಕಾರ್ಯ ಮೆಚ್ಚುವಂತದ್ದು.

– ಜಿ.ಎಸ್. ಪಾಟೀಲ.
ಶಾಸಕರು ಹಾಗೂ ಖನಿಜ ನಿಗಮದ ಅಧ್ಯಕ್ಷರು.

ತೋಂಟದಾರ್ಯ ಪಾಲಿಟೆಕ್ನಿಕ್ ಕಾಲೇಜಿನ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ತೋಂಟದಾರ್ಯ ಪಾಲಿಟೆಕ್ನಿಕ್ ಕಾಲೇಜಿನ 2023-24ನೇ ಸಾಲಿನ ಅಂತಿಮ ವರ್ಷದ ಹಾಗೂ 2ನೇ ವರ್ಷದ ಡಿಪ್ಲೋಮಾ ಪರೀಕ್ಷೆಯ ಫಲಿತಾಂಶ ಶೇಕಡಾ 100ರಷ್ಟು ಆಗಿದ್ದು, ಎಲ್ಲಾ ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.

ಅಂತಿಮ ವರ್ಷದ ಇ&ಇ ವಿಭಾಗದಲ್ಲಿ ಸಾಯಿಕುಮಾರ ರಾಯ್ಕರ್ ಶೇ. 89.50 ಅಂಕಗಳೊಂದಿಗೆ ಪ್ರಥಮ, ಕಂಪ್ಯೂಟರ್ ಸೈನ್ಸ್ ವಿಭಾಗದಲ್ಲಿ ಸುಷ್ಮಿತಾ ಎಸ್.ನಾಗೂರ ಶೇ. 87.30, ಮೆಕ್ಯಾನಿಕಲ್ ವಿಭಾಗದಲ್ಲಿ ಮಹಮ್ಮದ್ ಮೊಮಿನ್ ಶೇ. 83.40, ಇಸಿ ವಿಭಾಗದಲ್ಲಿ ಅಭಿಷೇಕ್ ವಜ್ರಬಂಡಿ ಶೇ. 82.10, ಸಿವಿಲ್ ವಿಭಾಗದಲ್ಲಿ ಪೂಜಾ ಕೆ.ನಾಯಕ್ ಶೇ. 77 ಅಂಕ ಗಳಿಸಿ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ಉತ್ತಮ ಫಲಿತಾಂಶದೊಂದಿಗೆ ತೇರ್ಗಡೆಯಾದ ಎಲ್ಲ ವಿದ್ಯಾರ್ಥಿಗಳಿಗೆ ಸಂಸ್ಥೆಯ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ, ಕಾಲೇಜಿನ ಪ್ರಾಚಾರ್ಯ ವಿನೋದ ರಾಯ್ಕರ್ ಹಾಗೂ ಕಾಲೇಜಿನ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

ಶ್ರೀ ರಾಮಕರುಣಾನಂದ ಶಿಕ್ಷಣ ಸಂಸ್ಥೆಯಲ್ಲಿ ಯೋಗ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ಬಿಂಕದಕಟ್ಟಿಯ ಶ್ರೀ ರಾಮಕರುಣಾನಂದ ಶಿಕ್ಷಣ ಸಂಸ್ಥೆಯ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಿಶ್ವ ಯೋಗ ದಿನವನ್ನು ಆಚರಿಸಲಾಯಿತು. ಶಾಲೆಯ ಪ್ರಾಂಶುಪಾಲ ರಾಘವೇಂದ್ರ ಕೆ.ಆರ್. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ನಿತ್ಯ ಜೀವನದಲ್ಲಿ ಯೋಗಾಭ್ಯಾಸದ ಅವಶ್ಯಕತೆ ಮತ್ತು ಉಪಯೋಗದ ಕುರಿತು ತಿಳಿಸಿಕೊಟ್ಟರು.

ಶಾಲೆಯ ಶಿಕ್ಷಕಿ ಶೈಲಾ ಬೆರಗೇರಿ ಯೋಗದ ಮಹತ್ವ ಕುರಿತು ವಿವರಿಸಿದರು. ಇನ್ನೋರ್ವ ಶಿಕ್ಷಕಿ ಪ್ರತಿಭಾ ಕಮ್ಮಾರ್ ಸರ್ವರಿಗೂ ಯೋಗಾಭ್ಯಾಸ ಮಾಡಿಸಿದರು. ಶಾಲೆಯ ವಿದ್ಯಾರ್ಥಿನಿಯರು ಯೋಗ ನೃತ್ಯ ಪ್ರದರ್ಶಿಸಿದರು. ಶೃತಿ ಬೈಹಟ್ಟಿ ಸ್ವಾಗತಿಸಿದರು. ಶಿಕ್ಷಕ ಚನ್ನಬಸಪ್ಪ ವೆಂಕಟಾಪುರ್ ಕಾರ್ಯಕ್ರಮ ನಿರೂಪಿಸಿದರು. ಅಕ್ಕಮ್ಮ ಹರಿಜನ ವಂದಿಸಿದರು. ಯೋಗಾಭ್ಯಾಸದಲ್ಲಿ ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಪಾಲ್ಗೊಂಡಿದ್ದರು.

ಕೊಲೆ ಪ್ರಕರಣ: ನಟ ದರ್ಶನ್ ಸೇರಿ ನಾಲ್ವರು 12 ದಿನ ನ್ಯಾಯಾಂಗ ಬಂಧನಕ್ಕೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿಗಳಾದ ನಟ ದರ್ಶನ್ ಹಾಗೂ ಇತರ ಮೂವರನ್ನು 12 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಬೆಂಗಳೂರಿನ 24ನೇ ಎಸಿಎಂಎಂ ನ್ಯಾಯಾಲಯ ಆದೇಶಿಸಿದೆ.

ಆರೋಪಿಗಳ ಪೊಲೀಸ್ ಕಸ್ಟಡಿ ಅವಧಿ ಮುಕ್ತಾಯಗೊಂಡ ಹಿನ್ನೆಲೆ, ಇಂದು (ಜೂನ್ 22) ಮಧ್ಯಾಹ್ನ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿತ್ತು.

ವಿಚಾರಣೆ ವೇಳೆ ಪ್ರಕರಣ ತನಿಖಾಧಿಕಾರಿ ಎಸಿಪಿ ಎಲ್. ಚಂದನ್ ಕುಮಾರ್ ಪ್ರಕರಣದ ಸಿಡಿಯನ್ನು (ಕೇಸ್ ಡೈರಿ) ಮುಚ್ಚಿದ ಲಕೋಟೆಯಲ್ಲಿ ಹಾಗೂ ಮುಕ್ತ ರಿಮ್ಯಾಂಡ್ ಅರ್ಜಿಯ ದಸ್ತಾವೇಜನ್ನು ನ್ಯಾಯಾಧೀಶರಿಗೆ ಸಲ್ಲಿಸಿದರು.

ಅದನ್ನು ದಾಖಲಿಸಿಕೊಂಡ ನ್ಯಾಯಾಧೀಶರಾದ ವಿಜಯಕುಮಾರ್ ಎಸ್. ಜಾಟ್ಲಾ, 30 ನಿಮಿಷಗಳ ಕಾಲ ವಿಚಾರಣೆ ನಡಸಿ ಎಲ್ಲಾ ಆರೋಪಿಗಳನ್ನು ಜುಲೈ 4ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಪ್ರಕರಣ ಎರಡನೇ ಆರೋಪಿಯಾದ ನಟ ದರ್ಶನ್, 9 ಆರೋಪಿ ಡಿ. ಧನರಾಜ್, 10ನೇ ಆರೋಪಿ ವಿ.ವಿನಯ್ ಮತ್ತು 14ನೇ ಆರೋಪಿ ಪ್ರದೋಷ್ ಅನ್ನು ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ. ಪೊಲೀಸರು ಎಲ್ಲಾ ಆರೋಪಿಗಳನ್ನು ಪರಪ್ಪನ ಅಗ್ರಹಾರದ ಕೇಂದ್ರ ಕಾರಾಗೃಹಕ್ಕೆ ಕರೆದೊಯ್ದಿದ್ದಾರೆ.

ಪ್ರಕರಣದಲ್ಲಿ ಒಂದನೇ ಆರೋಪಿಯಾಗಿರುವ ಪವಿತ್ರಾ ಗೌಡ ಸೇರಿ 12 ಆರೋಪಿಗಳನ್ನು ನ್ಯಾಯಾಲಯ ಗುರುವಾರ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದು, ಅವರೆಲ್ಲರನ್ನು ಈಗಾಗಲೇ ಪರಪ್ಪನ ಅಗ್ರಹಾರದಲ್ಲಿ ಇರಿಸಲಾಗಿದೆ.

ನಿಧನ ವಾರ್ತೆ

ತಿಮ್ಮನಗೌಡ ಪಾಟೀಲ

ಗದಗ: ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲರ ತಂದೆ ತಿಮ್ಮನಗೌಡ ದೊಡ್ಡಬಸನಗೌಡ ಪಾಟೀಲ (89) ಶನಿವಾರ ನಿಧನರಾಗಿದ್ದಾರೆ. ಶ್ರೀಯುತರ ಅಂತಿಮ ಸಂಸ್ಕಾರವು ಅವರ ಸ್ವಗ್ರಾಮ ರೋಣ ತಾಲೂಕ ಮಲ್ಲಾಪೂರದಲ್ಲಿ ರವಿವಾರ ಬೆಳಿಗ್ಗೆ 10 ಗಂಟೆಗೆ ನಡೆಯಲಿದೆ.

ಮೃತರು ಮೂವರು ಪುತ್ರರು, ಮೂವರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಶ್ರೀಯುತರ ನಿಧನಕ್ಕೆ ಮಾಜಿ ಮುಖ್ಯಮಂತ್ರಿ, ಹಾಲಿ ಸಂಸದ ಬಸವರಾಜ ಬೊಮ್ಮಾಯಿ, ಶಾಸಕ ಸಿಸಿ ಪಾಟೀಲ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಸಂಸದ ಪಿ.ಸಿ. ಗದ್ದಿಗೌಡ್ರ, ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಮುಂತಾದವರು ಸಂತಾಪ ಸೂಚಿಸಿದ್ದಾರೆ.

ಯೋಗ ತರಬೇತಿ, ಆಯುಷ್ ಪರಿಚಯ ಕಾರ್ಯಕ್ರಮದಲ್ಲಿ ಡಾ.ಮತ್ತಿಗಟ್ಟಿ

ಯೋಗ ವಿದ್ಯೆಯು ಋಷಿಮುನಿಗಳ ಕೊಡುಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ಹಲವಾರು ವರ್ಷಗಳಿಂದಲೂ ಭಾರತ ದೇಶದಲ್ಲಿ ಆಚರಣೆಯಲ್ಲಿರುವ ಯೋಗ ವಿದ್ಯೆಯು ಋಷಿ ಮುನಿಗಳಿಂದ ಸನ್ಮಾರ್ಗ ಹಾಗೂ ಉತ್ತಮ ಜೀವನ ಶೈಲಿಯಾಗಿ ಬೆಳೆದು ಬಂದಿದೆ ಎಂದು ಡಾ.ಅಶೋಕ ಮತ್ತಿಗಟ್ಟಿ ಹೇಳಿದರು.

ಅವರು ಗದಗ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯಿಂದ ನಗರದ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ಜರುಗಿದ ಯೋಗ ತರಬೇತಿ ಹಾಗೂ ಆಯುಷ್ ಪರಿಚಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅತಿಥಿಯಾಗಿ ಆಗಮಿಸಿದ್ದ ಡಾ. ಸಾಯಿಪ್ರಕಾಶ ಮಡಿವಾಳರ, ಡಾ.ಸಂಜೀವ ನಾರಪ್ಪನವರ ಮಾತನಾಡಿ, ಆಯುಷ್ ಪದ್ಧತಿಗಳಾದ ಯೋಗ, ಆಯುರ್ವೆದ, ಪ್ರಕೃತಿ ಚಿಕಿತ್ಸೆಗಳು ಮನುಷ್ಯನ ವಿವಿಧ ನೋವುಗಳಿಗೆ ಪರಿಣಾಮಕಾರಿ ಚಿಕಿತ್ಸೆ ನೀಡಬಲ್ಲ ಉತ್ತಮ ಸಾಧನಗಳಾಗಿವೆ. ಯುವ ಪೀಳಿಗೆ ಇದನ್ನು ಅನುಸರಿಸಿ ಉಳಿಸಿ-ಬೆಳೆಸುವ ಕಾರ್ಯ ಮಾಡಬೇಕೆಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ನಿಲಯದ ಮೇಲ್ವಿಚಾರಕಿ ಸುಜಾತಾ ಪಾಟೀಲ, ಮನುಷ್ಯನ ಆರೋಗ್ಯದ ಹಲವಾರು ಸಮಸ್ಯೆಗಳಿಗೆ ಸೂಕ್ತವಾದ ಉತ್ತರ ಆಯುರ್ವೆದ ಶಾಸ್ತ್ರದಲ್ಲಿದೆ. ಯೋಗದಂತಹ ಪ್ರಕ್ರಿಯೆಗಳು ನಮ್ಮನ್ನು ಸದೃಢರನ್ನಾಗಿ ಮಾಡುತ್ತವೆ ಎಂದರು.

ಪತಂಜಲಿ ಯೋಗ ಶಿಕ್ಷಣ ಸಮಿತಿ ಗದಗ ಶಾಖೆಯ ಯೋಗ ಗುರು ಮುರಳೀಧರ ಶ್ಯಾವಿ ಯೋಗಾಸನ ಹಾಗೂ ಅವುಗಳ ವಿಧಾನಗಳು, ಉಪಯೋಗಗಳನ್ನು ತಿಳಿಸಿ ಯೋಗ ಮಾಡುವ ವಿಧಾನಗಳನ್ನು ವಿದ್ಯಾರ್ಥಿನಿಯರಿಗೆ ಮನವರಿಕೆ ಮಾಡಿದರು.

ರಾಜ್ಯಮಟ್ಟದ ಯೋಗ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ನಿಲಯದ ಐಶ್ವರ್ಯ ಹೊಸಮನಿ, ಶ್ವೇತಾ ಬಾಗೇವಾಡಿ ಅವರುಗಳನ್ನು ಗೌರವಿಸಲಾಯಿತು. ಪವಿತ್ರಾ ಕನಕಗಿರಿ ಹಾಗೂ ಟಿ. ವನಜಾಕ್ಷೀ ಪ್ರಾರ್ಥಿಸಿದರು. ಶಿಲ್ಪಾ ಲಮಾಣಿ ಸ್ವಾಗತಿಸಿದರು. ಪಾರ್ವತಿ ದೊಡ್ಡಮನಿ ಪರಿಚಯಿಸಿದರು. ಮುಕ್ತಾ ಹಡಪದ ನಿರೂಪಿಸಿದರು. ಕೊನೆಗೆ ಐಶ್ವರ್ಯ ಹೊಸಮನಿ ವಂದಿಸಿದರು.

‘ಪುಲಿಗೆರೆ ಪೌರ್ಣಿಮೆ’ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಋತುಮಾನಗಳಿಗೆ ತಕ್ಕಂತೆ ನಮ್ಮ ಹಬ್ಬ-ಹುಣ್ಣಿಮೆಗಳಿದ್ದು, ಅವು ಪ್ರಕೃತಿಗೆ ಪೂರಕವಾಗಿವೆ. ಅನ್ನದಾತನ ಸಂಗಾತಿಯಾದ ಎತ್ತುಗಳನ್ನು ಸಿಂಗರಿಸಿ ಸಂಭ್ರಮಿಸುವುದೇ ಕಾರ ಹುಣ್ಣಿಮೆಯ ವೈಶಿಷ್ಟತೆ ಎಂದು ಲಕ್ಷ್ಮೇಶ್ವರದ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಅಭಿಪ್ರಾಯಪಟ್ಟರು.

ಅವರು ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿಯ ವತಿಯಿಂದ ಪ್ರತಿ ಹುಣ್ಣಿಮೆಯಂದು ಹಮ್ಮಿಕೊಳ್ಳಲಾಗುವ ‘ಪುಲಿಗೆರೆ ಪೌರ್ಣಿಮೆ’ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಭಾಗವಹಿಸಿ ‘ಕಾರ ಹುಣ್ಣಿಮೆ ಹಾಗೂ ಅಂತಾರಾಷ್ಟ್ರೀಯ ಯೋಗ ದಿನಾಚರಣೆ-ಒಂದು ಚಿಂತನೆ’ ವಿಷಯದ ಕುರಿತು ಮಾತನಾಡಿದ ಶಿಕ್ಷಕ ಬಿ.ಟಿ. ಹೆಬ್ಬಾಳ, ಮುಂಗಾರಿಗೆ ಹದಗೊಳಿಸಿದ ಹೊಲದಲ್ಲಿ ಬಿತ್ತನೆಗೆ ಸಜ್ಜಾಗಿರುವ ರೈತ ತನ್ನ ಒಡನಾಡಿ ಎತ್ತುಗಳನ್ನು ಹುರಿದುಂಬಿಸುವ ಹಬ್ಬ ಕಾರ ಹುಣ್ಣಿಮೆ ಹಾಗೂ ಭಾರತದ ಅಂತಾರಾಷ್ಟ್ರೀಯ ಗೌರವ ಹೆಚ್ಚಿಸಿದ ಯೋಗ ದಿನಾಚರಣೆ ಎರಡೂ ಒಂದೇ ದಿನ ಆಚರಣೆ ಮಾಡುತ್ತಿರುವುದು ಕೂಡ ಯೋಗಾಯೋಗ ಎಂದು ಅಭಿಪ್ರಾಯಪಟ್ಟರು.

ವಿಶ್ರಾಂತ ಶಿಕ್ಷಕ ಶೇಖಪ್ಪ ಉಪ್ಪಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಬಸನಗೌಡ ಪಾಟೀಲ, ಶಿವಜೋಗಪ್ಪ ಚಂದರಗಿ ಅತಿಥಿಪರ ನುಡಿಗಳನ್ನಾಡಿದರು. ಕಾರ್ಯಕ್ರಮದಲ್ಲಿ ಹಿರಿಯ ಚಿಂತಕರಾದ ಡಿ.ಬಿ. ಬಳಿಗಾರ, ಹಾಲೆವಾಡಿಮಠ, ಟ್ರಸ್ಟ್ ಕಮಿಟಿಯ ಪದಾಧಿಕಾರಿಗಳಾದ ಪೂರ್ಣಾಜಿ ಕರಾಟೆ, ನೀಲಪ್ಪ ಕರ್ಜಕಣ್ಣವರ, ಸುರೇಶ ರಾಚನಾಯ್ಕರ, ಸೋಮಣ್ಣ ಅಣ್ಣಿಗೇರಿ, ಎಸ್.ಎಫ್. ಆದಿ, ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಗರಾಜ ಹಣಗಿ, ಎಂ.ಕೆ. ಕಳ್ಳಿಮಠ, ನಿಂಗಪ್ಪ ಗೊರವರ, ಎನ್.ಆರ್. ಸಾತಪುತೆ, ಗೋಪಾಲ ನಾಯಕ, ಎಸ್.ಎಸ್. ಬಳ್ಳೊಳ್ಳಿ, ಅಶೋಕ ನೀರಾಲೋಟಿ, ಎಚ್.ಜಿ. ದುರಗಣ್ಣವರ ಮುಂತಾದವರು ಹಾಜರಿದ್ದರು.

ಕಮಿಟಿಯ ಸಂಚಾಲಕ ಗಂಗಾಧರ ಗುಡಗೇರಿ, ನಾಗರಾಜ ಕಳಸಾಪುರ, ಸೋಮಶೇಖರ ಕೆರಿಮನಿ ಸನ್ಮಾನ ಕಾರ್ಯಕ್ರಮ ನಡೆಸಿಕೊಟ್ಟರು. ಪ್ರಧಾನ ಕಾರ್ಯದರ್ಶಿ ಈಶ್ವರ ಮೆಡ್ಲೇರಿ ಸ್ವಾಗತಿಸಿದರು. ಜಯಪ್ರಕಾಶ ಹೊಟ್ಟಿ ಪ್ರಾರ್ಥಿಸಿದರು. ಸ್ನೇಹ ಮಾಲಿಗೌಡ್ರ ಕಾರ್ಯಕ್ರಮ ನಿರೂಪಿಸಿದರು. ರೇಣುಕಾ ಉಪ್ಪಿನ ವಂದಿಸಿದರು.

ಸಂಸ್ಥಾಪನಾ ದಿನದ ಅಂಗವಾಗಿ ರಕ್ತದಾನ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾದ ಸಂಸ್ಥಾಪನಾ ದಿನದ ಅಂಗವಾಗಿ ಗದಗ ಜಿಲ್ಲೆಗೆ ರಾಜ್ಯ ಸಮಿತಿ ಸದಸ್ಯ ರಿಯಾಜ ಕಡಂಬು ಹಾಗೂ ಜಿಲ್ಲಾ ಉಸ್ತುವಾರಿ ರಮಜಾನ ಕಡಿವಾಲ ಭೇಟಿ ನೀಡಿದರು.

ಪಕ್ಷದ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ ಸ್ವಾಗತಿಸಿ, ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಐಎಂಎ ಸಂಸ್ಥೆಯ ಅಧ್ಯಕ್ಷ ಪವಾಡಶೆಟ್ಟರ, ರೆಡ್ ಕ್ರಾಸ್ ಸೊಸೈಟಿ ಕಾರ್ಯದರ್ಶಿ ಡಾ. ಸಾಮುದ್ರಿ, ಐಎಂಎ ಸಂಸ್ಥೆಯ ಮಾಜಿ ಅಧ್ಯಕ್ಷರು ಹಾಗೂ ಖ್ಯಾತ ವೈದ್ಯ ಪ್ಯಾರಅಲಿ ನೂರಾನಿ, ಹಿರಿಯ ವಕೀಲ ಎಂ.ಎಂ. ಕುಕನೂರ್, ಎಂ.ಎಂ. ಮೌಲ್ವಿ, ಅಂಜುಮನ್ ಇಸ್ಲಾಂ ಪಾಲಿಟೆಕ್ನಿಕ್ ಚೇರಮನ್ ಜಾಕೀರ್ ಮುಜಾವರ್, ಮುಸ್ಲಿಂ ಸಮಾಜದ ಉಲೇಮಾ (ಮುಫ್ತಿ)ಗಳಾದ ಮೊಹಮ್ಮದ್ ಸಿದ್ದಿಕ್ ಕಾಸ್ಮಿ ಉಪಸ್ಥಿತರಿದ್ದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನ್ವರ್ ಬಾಗೇವಾಡಿ ವಂದಿಸಿದರು. ಈ ಸಂದರ್ಭದಲ್ಲಿ ಪಕ್ಷದ ಉಪಾಧ್ಯಕ್ಷ ಹಿದಾಯತುಲ್ಲಾ ಕಾಗದಗಾರ, ಕಾರ್ಯದರ್ಶಿ ಇರ್ಫಾನ್ ಗುಳಗುಂದಿ, ಖಜಾಂಚಿ ಮುಜಾಹಿದ್ ಕಣಕೇನ್ನವರ, ಅನ್ವರ್ ಮುಲ್ಲಾ, ಮುಸ್ತಾಕ್ ಹೊಸಮನಿ, ಹಸ್ಸನ್ ನಾಗನೂರ್, ಇಬ್ರಾಹಿಂ, ಇಸ್ಮಾಯಿಲ್ ಅಣ್ಣಿಗೇರಿ ಪಾಲ್ಗೊಂಡಿದ್ದರು.

ಗದಗ ತಾಲೂಕಿನ ಬೆಟಗೇರಿ ವಲಯದ ಬಣ್ಣದ ನಗರ ಕಾರ್ಯಕ್ಷೇತ್ರದ ಶ್ರೀ ವಿನಾಯಕ ಜ್ಞಾನವಿಕಾ

ಅಭಿವಂದನಾ ಸಮಾರಂಭ, 'ಸಾಧನೆಯ ಸಿರಿ' ಗ್ರಂಥ ಸಮರ್ಪಣಾ ಕಾರ್ಯಕ್ರಮ

ಎಸ್.ವಿ. ನೇಗಲಿ ಅಭಿನಂದನಾ ಸಮಾರಂಭ ಇಂದು

■ ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣದ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯಲ್ಲಿ ಶಿಕ್ಷಕರಾಗಿ, ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ, ಕರ್ನಾಟಕ ರಾಜ್ಯ ಪಂಚಮಸಾಲಿ ಸಮಾಜದ ಸಂಸ್ಥಾಪಕ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ ಎಸ್.ವಿ. ನೇಗಲಿ ಗುರುಗಳ ಅಭಿವಂದನಾ ಸಮಾರಂಭ ಮತ್ತು ಸಾಧನೆಯ ಸಿರಿ ಗ್ರಂಥ ಸಮರ್ಪಣಾ ಕಾರ್ಯಕ್ರಮವು ಜೂನ್ 23ರ ಬೆಳಿಗ್ಗೆ 10ಕ್ಕೆ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯ ಆವರಣದಲ್ಲಿ ನಡೆಯಲಿದೆ ಎಂದು ಕೋಟುಮಚಗಿಯ ಎಸ್.ವಿ. ನೇಗಲಿ ಫೌಂಡೇಷನ್ ಹಾಗೂ ಎಸ್.ವಿ. ನೇಗಲಿ ಗುರುಗಳ ಅಭಿವಂದನಾ ಗ್ರಂಥ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾಜಿ ಸಚಿವರಾದ ಸಿ.ಸಿ. ಪಾಟೀಲ, ಶಂಕರ ಪಾಟೀಲ ಮುನೇನಕೊಪ್ಪ, ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕ ಕಳಕಪ್ಪ ಬಂಡಿ, ಡಾ. ಡಿ.ಎ. ಉಪಾಧ್ಯ, ಸಂಚಾಲಕ ವಿ.ಎಸ್. ನೇಗಲಿ, ಸಂಘದ ರಾಜ್ಯಾಧ್ಯಕ್ಷ ಜಿ.ಪಿ. ಪಾಟೀಲ, ಮಾಜಿ ಅಧ್ಯಕ್ಷ ಭಾವಿ ಬೆಟ್ಟಪ್ಪ, ನಾಗನಗೌಡರು, ಪ್ರಧಾನ ಕಾರ್ಯದರ್ಶಿ ಬಿ.ಸಿ. ಉಮಾಪತಿ, ವಿಜ್ಞಾನಿ ಡಾ. ವಿ.ಕೆ. ಬಣಕಾರ, ವಿ.ಪ ಮಾಜಿ ಸದಸ್ಯ ಮೋಹನ ಲಿಂಬಿಕಾಯಿ, ಮಾಜಿ ಶಾಸಕ ನಂದಿಹಳ್ಳಿ ಹಾಲಪ್ಪ, ಸಂಘದ ಕಾರ್ಯಾಧ್ಯಕ್ಷ ಸೋಮನಗೌಡ ಪಾಟೀಲ, ಉತ್ತರ ಕರ್ನಾಟಕ ಸಂಘ-ಸಂಸ್ಥೆಗಳ ಮಹಾಸಂಸ್ಥೆ ಬೆಂಗಳೂರಿನ ಶಿವಕುಮಾರ ಮೇಟಿ, ಶಿವಗಂಗವ್ವ ಶಂಕರಪ್ಪ ನೇಗಲಿ ಆಗಮಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ವಿಜ್ಞಾನಿ ಗೋಪಾಲ, ಕೃಷಿ ವಿಜ್ಞಾನಿ ಸೌಭಾಗ್ಯ ಬಸವಗೌಡ್ರ, ಇಂಜಿನಿಯರ್ ಡಾ. ಬಸವರಾಜ ನಾವ್ಹಿ, ಸಾವಯವ ಕೃಷಿ ಪಂಡಿತ ತುಕಾರಾಮ ನಾಯಕ, ನಾಟಿ ವೈದ್ಯ ಡಾ. ವೆಂಕಟ ರಾಮಾಂಜನೇಯ ಸ್ವಾಮಿ, ನೈಸರ್ಗಿಕ ಕೃಷಿ ಪಂಡಿತ ನಿಂಗಯ್ಯ ಹಿರೇಮಠ ಅವರನ್ನು ಸನ್ಮಾನಿಸಲಾಗುವುದೆಂದು ಪ್ರಕಟಣೆ ತಿಳಿಸಿದೆ.

ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಹಾಲಕೆರೆಯ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು, ವೀರಶೈವ ಲಿಂಗಾಯತ ಪಂಚಮಸಾಲಿ ಹರಿಹರ ಪೀಠಾಧ್ಯಕ್ಷರಾದ ಶ್ರೀ ವಚನಾನಂದ ಮಹಾಸ್ವಾಮಿಗಳು, ಧಾರವಾಡ ಮರುಘಾಮಠದ ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳು ಮತ್ತು ಅರಳಹಳ್ಳಿ ಶ್ರೀ ರಾಜರಾಜೇಶ್ವರಿ ಬೃಹನ್ಮಠದ ಶ್ರೀ ಗವಿಸಿದ್ದೇಶ್ವರ ತಾತನವರು ವಹಿಸಿಕೊಳ್ಳಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಡಾ. ಬಸವರಾಜ ದಿಂಡೂರ ನಿಕಟಪೂರ್ವ ರಾಜ್ಯಾಧ್ಯಕ್ಷರು ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘ ಇವರು ವಹಿಸಿಕೊಳ್ಳಲಿದ್ದು, ಮಾಜಿ ಸಚಿವ ಮುರುಗೇಶ ನಿರಾಣಿ ಸಮಾರಂಭವನ್ನು ಉದ್ಘಾಟಿಸಿ, ಸಾಧನೆಯ ಸಿರಿ ಗ್ರಂಥವನ್ನು ಬಿಡುಗಡೆ ಮಾಡಲಿದ್ದಾರೆ.

ಮಹಿಳಾ ಸಂಘಟನೆಯಿಂದ ಧನಸಹಾಯ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಹುಬ್ಬಳ್ಳಿಯ ಅಂಜಲಿ ಹತ್ಯೆ ಆರೋಪಿಯಿಂದ ಹಲ್ಲೆಗೊಳಗಾದ ಮುಳಗುಂದ ಪಟ್ಟಣದ ಲಕ್ಷ್ಮೀ ಮಾಹಾಂತಪ್ಪ ಸೊರಟೂರ ಕುಟುಂಬಕ್ಕೆ ಮುಳಗುಂದ ಮಹಿಳಾ ಸಂಘಟನೆಯಿಂದ 21 ಸಾವಿರ ರೂ ಮೊತ್ತದ ಚೆಕ್ ನೀಡಿದರು.

ಈ ಸಂದರ್ಭದಲ್ಲಿ ಮಾತಾ ಜಿಜಾಬಾಯಿ ಸಂಘಟನೆ ಅಧ್ಯಕ್ಷೆ ಗೀತಾ ಜಾಧಾವ ಮಾತನಾಡಿ, ಲಕ್ಷ್ಮೀ ಕುಟುಂಬ ಕಡು ಬಡತನದಿಂದ ಜೀವನ ನಡೆಸುತ್ತಿದ್ದರು. ಈ ಸಂದರ್ಭದಲ್ಲಿ ಹಲ್ಲೆಗೊಳಗಾಗಿ ಸಾಲ-ಸೋಲ ಮಾಡಿ ಚಿಕಿತ್ಸೆ ಪಡೆದಿದ್ದಾರೆ. ಇದರಿಂದ ಬದುಕು ಕಟ್ಟಿಕೊಳ್ಳುವುದು ದುಸ್ತರವಾಗಿದ್ದನ್ನು ಮಹಿಳಾ ಸಂಘಟನೆ ಮನಗಂಡು, ಸಾಧ್ಯವಾದ ನೆರವು ನೀಡಿದ್ದೇವೆ ಎಂದರು.

ಪ.ಪಂ ಸದಸ್ಯ ಎಸ್.ಸಿ. ಬಡ್ನಿ, ಕೆ.ಎಲ್. ಕರಿಗೌಡರ, ಪ್ರಕಾಶ ಮದ್ದಿನ, ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೆದ, ಅಕ್ಕಮ್ಮಾ ನೀಲಗುಂದ, ರೇಣುಕಾ ಜಾಧಾವ, ಶಾಂತವ್ವ ಹಿರೇಮಠ, ಅನಸವ್ವ ಆರೇರ, ಶೈಲಾ ಆರೇರ, ಯಲ್ಲಮ್ಮ ಮರಾಠಿ, ನಿರ್ಮಲಾ ಜಾಧಾವ, ಲಕ್ಷ್ಮೀ ಜಾಧಾವ, ರೇಣುಕಾ ಜಾಧಾವ ಹಾಗೂ ಲಕ್ಷ್ಮಿ ಕುಟುಂಬದ ಸದಸ್ಯರು ಇದ್ದರು.

ಸುವರ್ಣ ಕರ್ನಾಟಕ 50ರ ಸಂಭ್ರಮದ ಹಿನ್ನೆಲೆಯಲ್ಲಿ ರೋಣ ಪಟ್ಟಣಕ್ಕೆ ನಾಡಿನ ಹಿರಿಮೆ ಸಾರುವ ಕನ್ನಡದ ತೇರು ಶನಿವಾರ ಆಗಮಿಸಿತು. ಕನ್ನಡದ ತೇರನ್ನು ತಹಸೀಲ್ದಾರ್ ನಾಗರಾಜ ಕೆ ನೇತೃತ್ವದಲ್ಲಿ ಸಂಭ್ರಮದಿಂದ ಬರಮಾಡಿಕೊಂಡು ವಿವಿಧ ವೃತ್ತಗಳಲ್ಲಿ ಮೆರವಣಿಗೆ ನಡೆಸುವ ಮೂಲಕ ಬೀಳ್ಕೊಡಲಾಯಿತು.

ಶಿರಹಟ್ಟಿ ತಾಲೂಕಿನಾದ್ಯಂತ ರೈತರಲ್ಲಿ ಭರವಸೆ ಮೂಡಿಸಿದ ಮುಂಗಾರು

ಉತ್ತಮ ಬೆಳೆಯ ನಿರೀಕ್ಷೆಯಲ್ಲಿ ಅನ್ನದಾತ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಶಿರಹಟ್ಟಿ ತಾಲೂಕಿನಾದ್ಯಂತ ಉತ್ತಮ ಮಳೆಯಾಗಿದ್ದು, ರೈತರು ಈಗಾಗಲೇ ತಮ್ಮ ಜಮೀನುಗಳನ್ನು ಬಿತ್ತನೆಗೆ ಸಿದ್ಧಗೊಳಿಸಿ ಇದೀಗ ಬಿತ್ತನೆ ಕಾರ್ಯ ಆರಂಭಿಸಿದ್ದಾರೆ. ರೈತರಲ್ಲಿ ಭರವಸೆ ಜೊತೆಗೆ ಹೊಸ ಚೈತನ್ಯವೂ ಸಹ ಇಮ್ಮಡಿಯಾಗಿದೆ.

ಶಿರಹಟ್ಟಿ ಹೋಬಳಿಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಒಟ್ಟು 34445 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ. ಇದರಲ್ಲಿ ಪ್ರಮುಖವಾಗಿ 25 ಸಾವಿರ ಹೆಕ್ಟೇರ ಗೋವಿನಜೋಳ, 3200 ಹೆ.ಹೆಸರು, 110 ಹೆ.ತೊಗರಿ, 3100 ಹೆ.ಶೇಂಗಾ, 200 ಹೆ.ಸೂರ್ಯಕಾಂತಿ, 1610 ಹೆ.ಹತ್ತಿ, 65 ಹೆ.ಜೋಳ, 460 ಹೆ.ಭತ್ತ, 500 ಹೆ ಕಬ್ಬು ಬೆಳೆಗಳ ಬಿತ್ತನೆ ಗುರಿಯನ್ನು ಹೊಂದಲಾಗಿದೆ.

ಕೃಷಿ ಇಲಾಖೆ ರೈತ ಸಂಪರ್ಕ ಕೇಂದ್ರಗಳಲ್ಲಿ ಅಗತ್ಯ ಬೀಜ, ಔಷಧಿ ಹಾಗೂ ಲಘು ಪೋಷಕಾಂಶಗಳನ್ನು ಒದಗಿಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಹೆಸರು-75 ಕ್ವಿಂ, ತೊಗರಿ-90

ಕ್ವಿಂ, ಗೋವಿನಜೋಳ-850 ಕ್ವಿಂ, ಶೇಂಗಾ-25 ಕ್ವಿಂ ದಾಸ್ತಾನಿದ್ದು, ಇನ್ನೂ ಹೆಚ್ಚಿನ ದಾಸ್ತಾನು ಬರುವ ಸಾಧ್ಯತೆ ಇದೆ. ಒಂದು ಕೆಜಿ ಹೆಸರಿಗೆ ಸಾಮಾನ್ಯ ರೈತರಿಗೆ 24ರೂ., ಪಜಾ/ಪಪಂ ರೈತರಿಗೆ 36 ರೂ, ತೊಗರಿ ಸಾಮಾನ್ಯ ರೈತರಿಗೆ 25 ರೂ. ಎಸ್/ಎಸ್‌ಟಿ ರೈತರಿಗೆ 37.5ರೂ , ಗೋವಿನ ಜೋಳ ಸಾಮಾನ್ಯ ರೈತರಿಗೆ 20 ರೂ, ಎಸ್‌ಸಿ/ಎಸ್‌ಟಿ ರೈತರಿಗೆ 30 ರೂ. ಕೆಜಿಗೆ ಸರಕಾರದ ಸಹಾಯಧನ ನಿಗದಿ ಮಾಡಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ರೈತರು ಬಿತ್ತನೆ ಸಂದರ್ಭದಲ್ಲಿ ತೇವಾಂಶವನ್ನು ಪರಿಶೀಲಿಸಿ ಬಿತ್ತನೆಗೆ ಬೇಕಾದ ತೇವಾಂಶವಿದ್ದರೆ ಮಾತ್ರ ಬಿತ್ತನೆ ಮಾಡಬೇಕು. ಕಡ್ಡಾಯವಾಗಿ ಬೀಜೋಪಚಾರ ಮಾಡಬೇಕು. ಇದರಿಂದ ಮಣ್ಣಿನಿಂದ ಹರಡುವ ಹಲವಾರು ರೋಗಗಳು ಬಾರದಂತೆ ತಡೆಗಟ್ಟಬಹುದಾಗಿದೆ. ಮಣ್ಣಿನಲ್ಲಿ ಸಾವಯವ ಇಂಗಾಲ ಮತ್ತು ಲಘುಪೋಷಕಾಂಶಗಳ ಕೊರತೆ ಇರುವುದರಿಂದ ಸಾವಯವ ಗೊಬ್ಬರ, ಲಘುಪೋಷಕಾಂಶಗಳನ್ನು ಬಳಸಬೇಕು. ಆರಂಭಿಕ ಹಂತದಲ್ಲಿರುವ ಹೆಸರು ಬೆಳೆಗೆ ಪೋಷಕಾಂಶದ ಕೊರತೆಯಿಂದಾಗಿ ಎಲೆಗಳು ಹಳದಿ ಬಣ್ಣ-ಕ್ಕೆ ತಿರುಗಿದ್ದಲ್ಲಿ ಅತೀ ಕಡಿಮೆ ಪ್ರಮಾಣದಲ್ಲಿ ನ್ಯಾನೋ ಯ್ಯೂರಿಯಾ ಅಥವಾ ಶೇ.100 ನೀರಿನಲ್ಲಿ ಕರಗುವ 19:19:19 (5.0ಗ್ರಾಂ/ಲೀ)+ಲಘು ಪೋಷಕಾಂಶಗಳ ಮಿಶ್ರಣ (1-1.5ಗ್ರಾಂ/ಲೀ) ಸಿಂಪರಣೆ ಮಾಡಬೇಕು. ಬಿತ್ತನೆ ಮಾಡುವಾಗ ಶಿಫಾರಸ್ಸು ಮಾಡಲಾದ ಒಟ್ಟು ಸಾರಜನಕದ ಶೇ.50 ಮತ್ತು ಸಂಪೂರ್ಣ ಪ್ರಮಾಣದ ರಂಜಕ ಮತ್ತು ಪೋಟ್ಯಾಶ್ ರಸಗೊಬ್ಬರ ಉಪಯೋಗಿಸಬೇಕೆಂದು ಕೃಷಿ ಇಲಾಖೆ ಅಧಿಕಾರಿಗಳು ರೈತರಿಗೆ ತಿಳುವಳಿಕೆ ನೀಡುತ್ತಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಸಹಾಯಕ ಕೃಷಿ ನಿರ್ದೆಶಕ ರೇವಣೆಪ್ಪ ಮನಗೂಳಿ, ಮುಂಗಾರು ಮಳೆ ಉತ್ತಮವಾಗಿರುವದರಿಂದ ಒಳ್ಳೆಯ ಬೆಳೆ ಬರುವ ನಿರೀಕ್ಷೆ ಹೊಂದಲಾಗಿದೆ. ಇಲಾಖೆಯಿಂದ ಪ್ರಮಾಣೀಕೃತ ಬೀಜಗಳನ್ನು ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರು ಪಡೆದುಕೊಳ್ಳಬೇಕು ಎಂದರು.

ಯೋಗ ಬಲ್ಲವನಿಗೆ ರೋಗವಿಲ್ಲ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇತ್ತೀಚಿನ ವರ್ಷಗಳಲ್ಲಿ ಜಗತ್ತಿನ ಎಲ್ಲ ಮೂಲೆಗಳಲ್ಲೂ ಸಹ ಯೋಗ ಜನಪ್ರಿಯತೆ ಪಡೆದುಕೊಂಡಿದೆ. ಹೀಗಾಗಿ ವಿಶ್ವಕ್ಕೆ ಯೋಗವನ್ನು ಪರಿಚಯಿಸಿದ ಕೀರ್ತಿ ಭಾರತಕ್ಕಿದೆ. ಯೋಗದ ಜನಪ್ರೀಯತೆಯನ್ನು ಸಪ್ತ ಸಾಗರದಾಚೆಗೆ ಪಸರಿಸಿದ ಅನೇಕ ಯೋಗ ಗುರುಗಳ ಕೊಡುಗೆಯನ್ನು ಮರೆಯುವಂತಿಲ್ಲ ಎಂದು ತಹಸೀಲ್ದಾರ ಅನಿಲ ಬಡಿಗೇರ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿಯ ಎಸ್.ಎಂ. ಡಬಾಲಿ ತಾಲೂಕಾ ಕ್ರೀಡಾಂಗಣದಲ್ಲಿ ತಾಲೂಕಾ ಆಡಳಿತದ ವತಿಯಿಂದ ಜರುಗಿದ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು.

ಭಾರತವು ಯೋಗ ಸಂಪ್ರದಾಯವನ್ನು ಶ್ರೀಮಂತಗೊಳಿಸಿದೆ. ಯೋಗ ದೈಹಿಕ ಭಂಗಿಗಳು, ಉಸಿರಾಟದ ತಂತ್ರಗಳು, ಧ್ಯಾನ, ನೈತಿಕ ತತ್ವವನ್ನು ಸಂಯೋಜಿಸುವ ಒಂದು ಆರೋಗ್ಯ ವಿಧಾನವಾಗಿದೆ. ಅದಕ್ಕಾಗಿಯೇ ಹಿರಿಯರು ಯೋಗ ಬಲ್ಲವನಿಗೆ ರೋಗವಿಲ್ಲವೆಂದು ಹೇಳಿದ್ದಾರೆ. ಆದ್ದರಿಂದ ಪ್ರತಿಯೊಬ್ಬರೂ ನಿತ್ಯವೂ ತಮ್ಮ ದೈನಂದಿನ ಜೀವನದಲ್ಲಿ ಯೋಗ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಎಂ.ಕೆ. ಲಮಾಣಿ ಕಾರ್ಯಕ್ರಮ ನಿರೂಪಿಸಿದರು.

ಹುಲಕೋಟಿಯ ಸ್ವಾಮಿ ವಿವೇಕಾನಂದ ಪ.ಪೂ ವಿಜ್ಞಾನ ಮಹಾವಿದ್ಯಾಲಯ, ಪ್ರಕೃತಿ ಚಿಕಿತ್ಸೆ ಯೋಗ ವಿಜ್ಞಾನ ಸಂಸ್ಥೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಡಾ. ಪೂಜಾ ಕರಕನಗೌಡರ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಆರ್‌ಎಮ್‌ಎಸ್‌ಎಸ್ ಇನ್‌ಸ್ಟಿಟ್ಯೂಟ್ ಸಂಸ್ಥೆಯ ಬಿಎಸ್‌ಸಿ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯ ಬಸಯ್ಯ ಹಿರೇಮಠ, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

ಕಾಯಕಕ್ಕೆ ತಕ್ಕಷ್ಟೇ ಪ್ರತಿಫಲ ಬಯಸಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಬಸವಾದಿ ಶಿವಶರಣರು ಕಾಯಕಕ್ಕೆ ಕೊಟ್ಟಿರುವ ಸ್ಥಾನಮಾನ ಬಹಳ ದೊಡ್ಡದು. ಗುರು, ಲಿಂಗ, ಜಂಗಮಕ್ಕಿಂತಲೂ ಕಾಯಕ ಬಹಳ ವೈಶಿಷ್ಟ್ಯಪೂರ್ಣವಾದುದು ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2698ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಕಾಯಕದಿಂದ ಒಬ್ಬ ವ್ಯಕ್ತಿ ಭಗವಂತನಿಗೆ ಪ್ರಿಯನಾಗುತ್ತಾನೆ, ಭಕ್ತನಾಗುತ್ತಾನೆ ಎಂದು 12ನೇ ಶತಮಾನದಲ್ಲಿ ಶರಣರು ಹೇಳಿದ್ದಾರೆ.

ಸತ್ಯಶುದ್ಧ ಪ್ರಾಮಾಣಿಕ ಕಾಯಕದಿಂದ ಗಳಿಸಬೇಕು. ಕಾಯಕಕ್ಕೆ ತಕ್ಕಷ್ಟೇ ಪ್ರತಿಫಲ ಬಯಸಬೇಕು. ಕಾಯಕದಲ್ಲಿ ಆಸೆ ಇರಬಾರದು. ಆಸೆಯೆಂಬುದು ಭವದ ಬೀಜ. ಆಸೆಯಿಂದ ಕಾಯಕ ಮಾಡಿದರೆ ಮುಕ್ತಿ, ಲಿಂಗಾಂಗ ಸಾಮರಸ್ಯ, ಮೋಕ್ಷ ಲಭ್ಯವಾಗುವುದಿಲ್ಲ ಎಂದು ಶರಣರು ತಿಳಿಸಿದ್ದಾರೆ ಎಂದರು.

ಮೃತ್ಯುಂಜಯ ಹಿರೇಮಠ ಮತ್ತು ಗುರುನಾಥ ಸುತಾರ ತಂಡದವರು ವಚನ ಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಸುಪ್ರಿಯಾ ಎನ್.ನಾಗನೂರ, ವಚನ ಚಿಂತನೆಯನ್ನು ಅಮೃತ ವಿ.ಅಂಗಡಿ ಇವರು ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಿಕೊಂಡಿದ್ದ ಅಕ್ಕಿ ಕೊಟ್ರಪ್ಪನವರು ಮತ್ತು ಅಂದಾನಪ್ಪ ಶಾಂತಪ್ಪ ಚವಡಿ ಪರಿವಾರದವರನ್ನು ಪೂಜ್ಯರು ಸಂಮಾನಿಸಿದರು.

ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್‌ರಾದ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

'ಕಾಯಕ ಮತ್ತು ದಾಸೋಹ' ಕುರಿತು ಕಡೂರಿನ ಉಪನ್ಯಾಸಕ ಡಾ. ಜಿ.ವಿ. ಮಂಜುನಾಥ ಮಾತನಾಡಿ, ವಚನಗಳು ಶರಣರ ಅನುಭವದ ನುಡಿಗಳು. ಶರಣರ ದೃಷ್ಟಿಕೋನದಲ್ಲಿ ಜಂಗಮ ಎಂದರೆ ಅನಂತವಾದುದು, ಚಲನಶೀಲವಾದುದು ಜೀವಜಗತ್ತು. ಸತ್ಯ ಶುದ್ಧ ಕಾಯಕ ಕೈಗೊಂಡಂತಹ ಸಮಯದಲ್ಲಿ ಆ ಕಾಯಕ ಕೈಲಾಸವಾಗುವುದು. ಕಾಯಕದಲ್ಲಿ ನಿರತರಾದಾಗ ಗುರು, ಲಿಂಗ, ಜಂಗಮವನ್ನಾದರೂ ಮರೆಯಬೇಕು ಎಂದು ಶರಣರು ಹೇಳಿದ್ದಾರೆ ಎಂದು ಮಾತನಾಡಿದರು.



ರಾಜ್ಯ ಬಿಜೆಪಿಯಿಂದ ಶನಿವಾರ ಬೆಂಗಳೂರು ಅರಮನೆ ಮೈದಾನದಲ್ಲಿ ಎನ್ ಡಿಎ ನೂತನ ಸಂಸದರಿಗೆ ಏರ್ಪಡಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಪಾಲ್ಗೊಂಡು ಸನ್ಮಾನ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಸಂಸದೀಯ ಮಂಡಳಿ ಅಧ್ಯಕ್ಷ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಕೇಂದ್ರ ಸಚಿವರಾದ ಎಚ್. ಡಿ. ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಪ್ರತಿ ಪಕ್ಷದ ನಾಯಕ ಆರ್. ಅಶೋಕ್, ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ. ದೇವೇಗೌಡ ಹಾಗೂ ನೂತನ ಸಂಸದರು ಹಾಜರಿದ್ದರು.

ಪತ್ರಿಕಾ ಪ್ರಕಟಣೆ

ಸುವರ್ಣ ನಿಧಿ ಸೌಹಾರ್ದ ಸಹಕಾರಿ ಸಂಘ ನಿ.ಹರಪನಹಳ್ಳಿ,ಹರಪನಹಳ್ಳಿ ತಾಲ್ಲೂಕು ವಿಜಯ ನಗರ ಜಿಲ್ಲೆ ಸಹಕಾರಿಯ ಆಡಳಿತ ಮಂಡಳಿ ನಿರ್ದೇಶಕರ ಸಾಮಾನ್ಯ ಚುನಾವಣೆ ಜರುಗಿಸಲು ವೇಳಾಪಟ್ಟಿ ಪ್ರಕಟಿಸಲಾಗಿದ್ದು.

ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕ :05-07-2024 ರ ಮದ್ಯಾಹ್ನ 3-00 ಘಂಟೆಯವರೆಗೆ. ದಿನಾಂಕ : 06-07-2024 ರಂದು ನಾಮಪತ್ರಗಳ ಪರಿಶೀಲನೆ ಹಾಗೂ ದಿನಾಂಕ : 07-07-2024 ರಂದು ಮದ್ಯಾಹ್ನ 3-00 ಘಂಟೆಗೆ ನಾಮಪತ್ರ ವಾಪಾಸು ಪಡೆಯಲು ಕೊನೆಯ ದಿನವಾಗಿರುತ್ತದೆ. ಮತದಾನ ಅವಶ್ಯವಾದಲ್ಲಿ ದಿನಾಂಕ : 13-07-2024 ರಂದು ಸಹಕಾರಿಯ ಕಛೇರಿಯಲ್ಲಿ ಮತದಾನ ನಡೆಯಲಿದ್ದು, ಸಹಕಾರಿಯ ಸದಸ್ಯರುಗಳಿಗೆ ಚುನಾವಣಾ ವೇಳಾ ಪಟ್ಟಿಯನ್ನು ಕಳುಹಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ರಿಟರ್ನಿಂಗ್ ಅಧಿಕಾರಿಯನ್ನು ಸಂಪರ್ಕಿಸ ಬಹುದಾಗಿದೆ ಯೆಂದು ಪ್ರಕಟಣೆ ಮೂಲ